# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 16
Volume - 01 Issue - 16

ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269

ಚಿತ್ರದುರ್ಗ
Chitradurga

ದಿನಾಂಕ: 18–07–2023 ಮಂಗಳವಾರ
Date: 18-07-2023 Tuesday

ಪುಟ: 4
Page: 4

ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ಗ್ರಾಮಗಳಲ್ಲೂ ಗುಣಮಟ್ಟದ ರಸ್ತೆ ಶಾಸಕ ರಾಜ್ಯದಲ್ಲಿ ಯಾರಾದರೂ ಇದ್ದರೇ ಅದು ಚಂದ್ರಪ್ಪ: ಸಿದ್ದೇಶ್ವರ್ 2

ಕಾತ್ರಾಳು ಕೆರೆಗೆ ಹರಿದ ತುಂಗೆ ನೀರು ಸಿಹಿ ಹಂಚಿ ರೈತರ ಸಂಭ್ರಮ 3

ಕಾಂಗ್ರೆಸ್ ಸರ್ಕಾರ ಬಂದರೆ ನಾಡಿಗೆ ದರಿದ್ರ, ಬರ: ಮಾಜಿ ಸಿಎಂ ಎಚ್ಚಿಕೆ 4


## ಫಾಸ್ಟ್ ನ್ಯೂಸ್

### 13 ದಿನದ ಹೆಣ್ಣು ಶಿಶುವಿನ ಮೇಲೆ ಕೋತಿ ದಾಳಿ

» **ಚಿತ್ರದುರ್ಗ**

ನವಜಾತ ಶಿಶು ಮೇಲೆ ಕೋತಿಯೊಂದು ದಾಳಿ ಮಾಡಿದ ಘಟನೆ ತೊರೆಕೋಲಮ್ಮನಹಳ್ಳಿಯಲ್ಲಿ ನಡೆದಿದೆ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲೂಕಿನ ತೊರೆಕೋಲಮ್ಮನಹಳ್ಳಿಯಲ್ಲಿ ಮಂಜುಳಾ–ಸಿದ್ದೇಶ್ ದಂಪತಿಯ 13ದಿನದ ಹೆಣ್ಣು ಮಗು ಮನೆಯಲ್ಲಿ ಮಲಗಿದ್ದ ಶಿಶುವಿನ ಮೇಲೆ ಕೋತಿ ದಾಳಿ ಮಾಡಿದೆ. ಇದರಿಂದಾಗಿ ಮಗುವಿನ ಹಣೆ, ತಲೆ ಭಾಗದಲ್ಲಿ ಗಾಯಗೊಳಿಸಿದೆ ಗಾಬರಿಗೊಂಡ ತಾಯಿ ಕೂಗಿದಾಗ ಕೋತಿ ಓಡಿ ಹೋಗಿದೆ. ಗಾಯಗೊಂಡ ಮಗುವನ್ನು ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ದಾಖಲು ಮಾಡಲಾಗಿದೆ. ಕಳೆದ ಒಂದು ವಾರದಿಂದ ಗ್ರಾಮದಲ್ಲಿ ಕಾಣಿಸಿಕೊಂಡಿದ್ದ ಕೋತಿ. ಏಕಾಏಕಿ ಮನೆಗೆ ನುಗ್ಗಿ ಮಗುವಿನ ಮೇಲೆ ದಾಳಿ ಮಾಡುತ್ತಿದೆ. ಕೋತಿ ಸೆರೆಗೆ ತೊರೆಕೋಲಮ್ಮನಹಳ್ಳಿ ಗ್ರಾಮಸ್ಥರ ಆಗ್ರಹಿಸಿದ್ದಾರೆ.

### ವಂದೇ ಭಾರತ್ ರೈಲಿನಲ್ಲಿ ಬೆಂಕಿ ಅವಘಡ

» **ಭೋಪಾಲ್**

ಭೋಪಾಲ್–ದೆಹಲಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನಲ್ಲಿ ಬೆಂಕಿ ಅವಘಡ ಸಂಭವಿಸಿದೆ. ಇಂದು ನಿನ್ನೆ ಬೆಳಗ್ಗೆ ಮಧ್ಯಪ್ರದೇಶದ ಬಿನಾ ಜಿಲ್ಲೆಯ ಕುರ್ವೈ ಕೆಥೋರಾ ಬಳಿ ರೈಲು ಸಂಚರಿಸುತ್ತಿದ್ದಾಗ ದಿಢೀರ್ ಬೆಂಕಿ ಕಾಣಿಸಿಕೊಂಡಿದೆ. ರೈಲಿನ ಕೆಳಭಾಗದಲ್ಲಿ ಬೆಂಕಿ ಹೊತ್ತಿಕೊಂಡಿದ್ದು, ಅದೃಷ್ಟವಶಾತ್ ಯಾವುದೇ ದೊಡ್ಡ ಅನಾಹುತ ಸಂಭವಿಸಿಲ್ಲ. 20171 ವಂದೇ ಭಾರತ್ ರೈಲಿನಲ್ಲಿದ್ದ ಎಲ್ಲಾ ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ ಎಂದು ತಿಳಿದುಬಂದಿದೆ. ದಿಢೀರ್ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆಯೇ ರೈಲ್ವೆ ಪೊಲೀಸ್ ಸಿಬ್ಬಂದಿಯೊಬ್ಬರು ಮಣ್ಣಿನಿಂದ ನಂದಿಸಿದ್ದಾರೆ. ಅಷ್ಟರಲ್ಲಾಗಲೇ ಬೋಗಿಯ ಕೆಳಭಾಗದಲ್ಲಿ ಕೊಂಚ ಸುಟ್ಟು ಹೋಗಿದ್ದು, ಇನ್ನು ಈ ಅಗ್ನಿ ಅವಘಡಕ್ಕೆ ಕಾರಣವೇನು ಎನ್ನುವುದು ತಿಳಿದುಬಂದಿಲ್ಲ. ಈ ಬಗ್ಗೆ ರೈಲ್ವೆ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ.

### ಕೆ.ಟಿ.ಶ್ರೀಕಂಠೇಗೌಡರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ

» **ಬೆಂಗಳೂರು**

2022 ನೇ ಸಾಲಿನ ಪರಿಷತ್ ನ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಕಾಂಗ್ರೆಸ್ ನಾಯಕ ಕೆ.ಟಿ. ಶ್ರೀಕಂಠೇಗೌಡ ಅವರಿಗೆ ಘೋಷಣೆ ಮಾಡಲಾಗಿದೆ. ಜುಲೈ 18ರ ಸಂಜೆ 6 ಗಂಟೆಗೆ ವಿಧಾನಸೌಧಧ 3 ನೇ ಮಹಡಿಯ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎಸ್.ಆರ್.ಪಾಟೀಲ್‌ಗೆ2021ನೇಸಾಲಿನಅತ್ಯುತ್ತಮ ಶಾಸಕ ಹಾಗೂ 2022 ನೇ ಸಾಲಿನ ಅತ್ಯುತ್ತಮ ಶಾಸಕ ಪ್ರಶಸ್ತಿ ಯನ್ನು ಕೆ.ಟಿ.ಶ್ರೀಕಂಠೇಗೌಡರಿಗೆ ನೀಡಿ ಗೌರವಿಸಲಾಗುತ್ತದೆ. ಈಗಾಗಲೇ ಎಸ್. ಆರ್. ಪಾಟೀಲ್ ಗೆ ಹಾಗೂ ಶ್ರೀಕಂಠೇಗೌಡರಿಗೆ ಈಬಗ್ಗೆ ವಿಧಾನಪರಿಷತ್ ಕಾರ್ಯದರ್ಶಿ ಮೀನಾ ನಾಯಕ್ ಪತ್ರ ಬರೆದಿದ್ದಾರೆ.

### ಕಳಪೆ ಔಷಧಿ ಮಾರಟ ಅಂಗಡಿಗಳ ವಿರುದ್ದ ಸಿಡಿದ ರೈತರು

# ನುಸಿ ರೋಗದಿಂದ ಸಂಕಷ್ಟದಲ್ಲಿ ಜಿಲ್ಲೆಯ ಹೂ ಬೆಳೆಗಾರರ ಬದುಕು

» **ಚಿತ್ರದುರ್ಗ**

ರೇಷ್ಮೆ ಗೂಡಿನ ದರ ಕುಸಿಯುತ್ತಿದ್ದು ಸರ್ಕಾರ ಮಧ್ಯ ಪ್ರವೇಶಿಸಿ ಬೆಲೆ ನಿಗದಿ ಮಾಡಬೇಕು ಮತ್ತು ಚಾಕಿ ಹುಳುಗಳನ್ನು ಸಬ್ಸಿಡಿ ದರದಲ್ಲಿ ವಿತರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲೆಯಲ್ಲಿ ವ್ಯಾಪಕವಾಗಿ ರೈತರು ರೇಷ್ಮೆ ಬೆಳೆಯನ್ನು ಬೆಳೆಯುತ್ತಿದ್ದು ಬೆಲೆ ಸಾಕಷ್ಟು ಕುಸಿಯುತ್ತಿದ್ದು ರೈತರು ಸಂಕಷ್ಟದಲ್ಲಿದ್ದಾರೆ. ರೇಷ್ಮೆ ಬೆಳೆಯನ್ನು ವೈಜ್ಞಾನಿಕ ಕ್ರಮ ಅನುಸರಿಸಿ ಬೆಳೆಯಬೇಕಾಗಿರುತ್ತದೆ. ಇದುವರೆಗೂ ಬೈವೋಲ್ಟಿನ್ ಬೆಳೆಗೆ ಕೆಜಿಗೆ 800 ರೂ ನೀಡುತ್ತಿದ್ದರು.ಆದರೆ ಈಗ ಕೇಂದ್ರ ಸರ್ಕಾರ ಚೀನಾದಿಂದ ಹೆಚ್ಚಿನ ರೇಷ್ಮೆ ನೂಲು ಆಮದು ಮಾಡಿಕೊಂಡಿರುವುದೇ ರೇಷ್ಮೆ ಬೆಲೆ ಕುಸಿಲು ಕಾರಣ ಸ್ಥಳೀಯ ಖರೀದಿದಾರರು ಸಹ ಸರಿಯಾದ ಬೆಲೆ ನೀಡುತ್ತಿಲ್ಲ. ಹೀಗೆ ಪರಿಸ್ಥಿತಿ ಮುಂದುವರೆದರೆ ರೈತರು ಕಂಗಾಲಾಗಿದ್ದಾರೆ. ರೈತರು ರೇಷ್ಮೆ ಬೆಳೆ ಬೆಳೆಯುವುದು ಕೈಬಿಡುವ ವಾತವರಣ ನಿರ್ಮಾಣವಾಗುತ್ತಿದೆ. ಕೂಡಲೇ ರಾಜ್ಯ ಸರ್ಕಾರ ರೇಷ್ಮೆ ಬೆಳೆಗಾರರ ಹಿತ ಕಾಯಬೇಕು. ಮನವಿ ಮಾಡಿದರು. ಸರ್ಕಾರ ರೇಷ್ಮೆಯನ್ನು 800 ರೂ ಕೆಜಿ ದರ ಕಡಿಮೆ ಇಲ್ಲದಂತೆ ದರ ನಿಗದಿ ಮಾಡಿ ಖರೀದಿಸಬೇಕು.ಚಾಕಿ ಹುಳುಗಳ ಬೆಲೆ ಹೆಚ್ಚಾಗಿದ್ದು ಚಾಕಿ ಹುಳುಗಳನ್ನು ಸಬ್ಸಿಡಿ ದರದಲ್ಲಿ ವಿತರಿಸಬೇಕು ಮತ್ತು ಚಾಕಿ ಕೇಂದ್ರಗಳ ಗುಣಮಟ್ಟದ ರಕ್ಷಣೆಗೆ ಕ್ರಮ ವಹಿಸಬೇಕು. ರೇಷ್ಮೆಗೂಡು 1 ಕ್ಕೆ 50 ರೂ ಪ್ರೋತ್ಸಾಹ ಧನ ನೀಡುತ್ತಿದ್ದರು ಅದನ್ನು ನಿಲ್ಲಿಸಿದ್ದು ಅದನ್ನು ಪುನರ್ ಆರಂಭಿಸಿ 200 ರೂ ಪ್ರೋತ್ಸಾಹ ಧನ ನೀಡಬೇಕು. ರೇಷ್ಮೆ ಗೂಡಿನ ಸಾಗಣಿಕ ವೆಚ್ಚ ಬೇರೆ ಜಿಲ್ಲೆಯಂತೆ ನಮ್ಮ ಜಿಲ್ಲೆಗೆ ವಿಸ್ತರಿಸಬೇಕು. ರೇಷ್ಮೆ ಹುಳುವಿನ ಸಾಕಣಿಕೆ ಮನೆ ವೆಚ್ಚ 3 ಲಕ್ಷ ಇದ್ದು ಅದನ್ನು 6 ಲಕ್ಷಕ್ಕೆ ಹೆಚ್ಚುಗೊಳಿಸಿ ರೇಷ್ಮೆ ಬೆಳೆಗಾರರ ರಕ್ಷಣೆಗೆ ಸರ್ಕಾರ ಕೂಡಲೇ ಜಾರಿಗೊಳಿಸಲು ಕ್ರಮ ವಹಿಸಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.



ನುಸಿ ರೋಗಕ್ಕೆ ಹೂ ಬೆಳೆಗಾರರು ಕಂಗಾಲು, ಕಳಪೆ ಔಷಧಿ ಮಾರಟದ ಅಂಗಡಿಗಳ ವಿರುದ್ದ ಕ್ರಮ ವಹಿಸಿ: ಚಿತ್ರದುರ್ಗ ತಾಲೂಕಿನಲ್ಲಿ ಸಾವಿರಾರು ರೈತ ಕುಟುಂಬಗಳು ಹೂ ಬೆಳೆಯನ್ನು ನಂಬಿಕೊಂಡು ಜೀವನ ನಡೆಸುತ್ತಿದ್ದಾರೆ. ಕಳೆದ 4 ವರ್ಷಗಳಿಂದ ನುಸಿ ರೋಗದಿಂದ ಹೂ ಬೆಳೆಯಲ್ಲಿ ನಷ್ಟ ಅನುಭವಿಸುತ್ತಿದ್ದು ಯಾವ ಔಷಧಿ ಸಿಂಪಡಿಸಿದರು ಸಹ ನುಸಿ ರೋಗ ಹತೋಟಿಗೆ ಬರುತ್ತಿಲ್ಲ. ಅನೇಕ ಔಷಧಿ ಅಂಗಡಿಗಳಲ್ಲಿ ಬಯೋ ಕಂಪನಿ ಔಷಧಿ ಮಾರಟ ಮಾಡುತ್ತಿದ್ದಾರೆ. ಇದನ್ನು ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದರು ಪ್ರಯೋಜನವಾಗಿಲ್ಲ. ಕಳಪೆ ಔಷಧಿಯನ್ನು ಔಷಧಿ ಅಂಗಡಿಯವರು ಎಗ್ಗಿಲ್ಲದೆ ಮಾರಟ ಮಾಡುತ್ತಿದ್ದಾರೆ. ಅತಿ ಕಡಿಮೆ ಭೂ ಪ್ರದೇಶ ಹೊಂದಿರುವ ರೈತರು ಕಡಿಮೆ ಭೂ ಪ್ರದೇಶದಲ್ಲಿ ಹೂ ಬೆಳೆಗಳನ್ನು ಬೆಳೆಯುವ ಮೂಲಕ ರೈತರು ಬದುಕು ನಡೆಸುತ್ತಿದ್ದಾರೆ. ದಿನ ನಿತ್ಯದ ಖರ್ಚು ವೆಚ್ಚ ಮತ್ತು ಮಕ್ಕಳ ವಿದ್ಯಾಭ್ಯಾಸ ಸಹಾಯವನ್ನು ಹೂ ಬೆಳೆಯಲ್ಲಿ ನಿರ್ವಹಣೆ ಮಾಡುತ್ತಿದ್ದವಿ.ಆದರೆ ನುಸಿ ರೋಗದಿಂದ ರೈತರು ಬದುಕು ಸಂಕಷ್ಟಕ್ಕೆ ಸಿಲುಕಿದ್ದು ಅಧಿಕಾರಿಗಳು ನುಸಿ ರೋಗ ತಡೆಗೆ ಪರಿಹಾರ ನೀಡಲು ಕೃಷಿ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು.ಇಷ್ಟು ದಿನ ಕಣ್ಮುಚ್ಚಿ ಕುಳಿತಿರುವ ಅಧಿಕಾರಿಗಳ ವಿರುದ್ಧ ರೈತರು ಕಿಡಿಕಾರಿದರು. ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘ ಜಿಲ್ಲಾಧ್ಯಕ್ಷ ಜಿ.ಸುರೇಶ್ ಬಾಬು, ತಾಲೂಕು ಅಧ್ಯಕ್ಷ ಧನಂಜಯ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಹುಣಸೇಕಟ್ಟೆ ಕಾಂತರಾಜದ , ಸಿ.ನಾಗರಾಜ್ ಮುದ್ದಾಪುರ, ಚಂದ್ರಣ್ಣ, ಎಂ.ಬಿ.ತಿಪ್ಪೇಸ್ವಾಮಿ, ರವಿಕುಮಾರ್ ಮತ್ತು ರೈತರು ಭಾಗವಹಿಸಿದ್ದರು.

## ಉತ್ತಮ ಶಿಕ್ಷಣದಿಂದ ಉಜ್ವಲ ಭವಿಷ್ಯ: ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್

» **ಹಿರಿಯೂರು**



ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯುವ ಮೂಲಕ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ ಸುಧಾಕರ್ ಹೇಳಿದರು. ಹಿರಿಯೂರಿನ ತನ್ಯಾಸಿಗೌಂಡರ್ ಕಲ್ಯಾಣಮಂಟಪದಲ್ಲಿ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಶಾಖೆ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ತಾಲ್ಲೂಕಿನ ಶಿಕ್ಷಕರಿಗೆ ಶೈಕ್ಷಣಿಕ ಕಾರ್ಯಾಗಾರ ಮತ್ತು ಶಿಕ್ಷಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಪ್ರಸಕ್ತ ವರ್ಷದಲ್ಲಿ ತಾಲೂಕಿನ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ 26 ಕೋಟಿ ಅನುದಾನ ನೀಡಲಾಗುವುದು ಎಂದು ತಿಳಿಸಿದರು. ನನ್ನ ಅಧಿಕಾರದ ಅವಧಿಯಲ್ಲಿ ಕುಡಿಯುವ ನೀರು ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದರು. ಶಿಕ್ಷಕರ ಸಂಘದ ಸೇವಾ ಕೇಂದ್ರ ನಿರ್ಮಾಣಕ್ಕೆ ಸಹಕಾರ ನೀಡುವುದಾಗಿ ತಿಳಿಸಿದರು. ನಿವೃತ್ತ ನ್ಯಾಯಾಧೀಶರಾದ ಎಚ್ ಬಿಲ್ಲಪ್ಪನವರು ಮಾತನಾಡಿ ಶಿಕ್ಷಣದ ಜೊತೆಗೆ ಮಕ್ಕಳಲ್ಲಿ ಉತ್ತಮ ಮಾನವೀಯ ಮೌಲ್ಯಗಳು ಹಾಗೂ ಉತ್ತಮ ಸಂಸ್ಕಾರವನ್ನು ಬೆಳೆಸಿ ಪೋಷಿಸಬೇಕು ಎಂದು ಹೇಳಿದರು.ಎಸ್ಸೆಸ್ಸೆಲ್ಸಿ ಪರೀಕ್ಷಾ ಮಂಡಳಿಯ ನಿವೃತ್ತ ಕಾರ್ಯದರ್ಶಿ ಎಂ. ರೇವಣಸಿದ್ದಪ್ಪ ಮಾತನಾಡಿ ಇಂದಿನ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದುಕೊಂಡು ಸಮಾಜದ ಪ್ರಜ್ಞಾವಂತ ಪ್ರಜೆಗಳಾಗಿ ಹೊರಹೊಮ್ಮಬೇಕು ಎಂದು ಹೇಳಿದರು . ಡಿಡಿಪಿಐ ರವಿಶಂಕರ್ ರೆಡ್ಡಿ, ಜಿಲ್ಲಾ ಯೋಜನಾಧಿಕಾರಿ ಶೈಲಜಾ, ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ಡಿವೈಎಸ್ಪಿ ಚೈತ್ರಾ, ಮಾರುತೇಶ್, ಮಂಜುನಾಥ್, ಮಹೇಶ್ವರರೆಡ್ಡಿ, ಹನುಮಂತಪ್ಪ, ತಿಪ್ಪೇರುದ್ರಪ್ಪ, ಶಿವಕುಮಾರ್, ಹನುಮಂತರೆಡ್ಡಿ, ಶಿವಶಂಕರ್, ಖಾದಿರಮೇಶ್, ಕಂದೀಕೆರೆ ಸುರೇಶ್ ಬಾಬು, ಅಶೋಕ್ ಪಾಲ್ಗೊಂಡಿದ್ದರು

## ಅರಣ್ಯ ಭೂಮಿ ಉಳುಮೆ ರೈತರಿಗೆ ಶೀಘ್ರ ಹಕ್ಕುಪತ್ರ ವಿತರಣೆ: ಖಂಡ್ರೆ

» **ಮೈಸೂರು**



ಕಂದಾಯ ಸಚಿವರೊಂದಿಗೆ ಸಮಾಲೋಚನೆ ನಡೆಸಿ ಅರಣ್ಯ ಮತ್ತು ಕಂದಾಯ ಭೂಮಿಯ ಜಂಟಿ ಸಮೀಕ್ಷೆ ನಡೆಸುವ ಮೂಲಕ ಕಾನೂನು ವ್ಯಾಪ್ತಿಯಲ್ಲಿ ಹಕ್ಕುಪತ್ರದ ಸಮಸ್ಯೆಯನ್ನು ಪರಿಹರಿಸಲಾಗುವುದು ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಭರವಸೆ ನೀಡಿದ್ದಾರೆ.

ಶಾಸಕ ಅನಿಲ್ ಚಿಕ್ಕಮಾದು ಪಾಲ್ಗೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು ಜನರ ಅಹವಾಲಿಗೆ ಸ್ಪಂದಿಸಿದರು. ಡಿ.ಬಿ.ಕುಪ್ಪೆ ವ್ಯಾಪ್ತಿಯಲ್ಲಿ 12 ಕುಟುಂಬಗಳು ಅರಣ್ಯ ವಾಸಿಗಳು ಎಂಬ ಬಗ್ಗೆ ಇರುವ ಗೊಂದಲದ ಕುರಿತಂತೆ ಪರಿಶೀಲನೆ ಮಾಡಿ ಸೂಕ್ತ ಪರಿಹಾರ ಒದಗಿಸಲು ಶೀಘ್ರವೆ ಬೆಂಗಳೂರಿನಲ್ಲಿ ರಾಜ್ಯಮಟ್ಟದ ಸಭೆ ನಡೆಸಿ, ಇಂತಹ ಸಮಸ್ಯೆ ಇರುವ ರಾಜ್ಯದ ಎಲ್ಲಾ ಹಾಡಿ, ಮುಳುಗಡೆ ಪ್ರದೇಶದ ಸಂತ್ರಸ್ತರ ಜಮೀನುಗಳ ಕುರಿತಂತೆ ಪರ್ಯಾಲೋಚಿಸುವುದಾಗಿ ಸಚಿವರು ತಿಳಿಸಿದರು.ಅನಿಲ್ ಚಿಕ್ಕಮಾದು ಅವರು ತಮ್ಮ ಕ್ಷೇತ್ರದಲ್ಲಿ ಆನೆಗಳ ಹಾವಳಿ ಇದ್ದು ಕನಿಷ್ಠ 72 ಕಿಲೋಮೀಟರ್ ರೈಲ್ವೆ ಬ್ಯಾರಿಕೇಡ್ ನಿರ್ಮಿಸುವಂತೆ ಮಾಡಿದ ಮನವಿಗೆ ಸ್ಪಂದಿಸಿದ ಸಚಿವರು ಒಂದೇ ವರ್ಷದಲ್ಲಿ 72 ಕಿಮಿ ಒಂದೇ ಭಾಗದಲ್ಲಿ ನಿರ್ಮಿಸಲು ಸಾಧ್ಯವಿಲ್ಲ, ಆದರೆ ಆನೆಗಳ ಹಾವಳಿ ಹೆಚ್ಚಿರುವ ಪ್ರದೇಶಗಳಲ್ಲಿ ಆದ್ಯತೆಯ ಮೇರೆಗೆ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸುವುದಾಗಿ ತಿಳಿಸಿದರು. ತಾವು ಕಬಿನಿ ವ್ಯಾಪ್ತಿಯ ಅಂತರಸಂತೆ ಅರಣ್ಯ ಪ್ರದೇಶದಲ್ಲಿ ಸೌರಬೇಲಿ ಹೇಗೆ ಕಾರ್ಯ ನಿರ್ವಹಿಸುತ್ತದೆ ಎಂಬುದನ್ನು ಪರಿಶೀಲಿಸಿದ್ದಾಗಿ ತಿಳಿಸಿದ ಸಚಿವರು ಅರಣ್ಯದಲ್ಲೇ ವಾಸಿಸುವ ಆದಿವಾಸಿಗಳ ಸಮಸ್ಯೆ ಆಲಿಸಿದ್ದಾಗಿ ತಿಳಿಸಿದರು.

### ಪ್ರಮುಖ ಸುದ್ದಿ


## ರಾಜ್ಯಕ್ಕೆ ಕಾಲಿಟ್ಟ ಒಟ್ಮೈಟಿಸ್ ಎಂಬ ಕಾಯಿಲೆ: ಹೈನುಗಾರರೇ ಎಚ್ಚರ ವಹಿಸಿ

» **ಬೆಂಗಳೂರು**

ಕಳೆದ ವರ್ಷ ಹಸು ಕರುಗಳಿಗೆ, ಎತ್ತುಗಳಿಗೆ ಬಂದಿದ್ದ ಚರ್ಮಗಂಟು ರೋಗನಿಂದ ಇನ್ನೂ ರೈತರು ಸುಧಾರಿಸಿಲ್ಲ. ಆದರೆ ಇನ್ನೊಂದು ಮಾರಕ ಕಾಯಿಲೆ ರಾಜ್ಯಕ್ಕೆ ಒಕ್ಕರಿಸಿದೆ.

ತಮಿಳುನಾಡು ಭಾಗದಲ್ಲಿ ವ್ಯಾಪಕವಾಗಿ ಕಾಣಿಸಿಕೊಂಡಿದ್ದ ಒಟ್ಮೈಟಿಸ್ ಎಂಬ ಮಾರಕ ಕಾಯಿಲೆ ಇದೀಗ ರಾಜ್ಯಕ್ಕೂ ಕಾಲಿಟ್ಟಿದೆ.ಈ ಕಾಯಿಲೆ ಬಂದಲ್ಲಿ ಹಸು ಸಾವಿಗೀಡಾಗುವ ಸಾಧ್ಯತೆಯೇ ಹೆಚ್ಚಿರುತ್ತದೆ. ಹಸು ಬಚಾವಾದರೂ ಬಹಳ ಕಷ್ಟದಲ್ಲಿ ಎನ್ನಲಾಗುತ್ತದೆ.

ಒಟ್ಮೈಟಿ[illegible] ಕಾಯಿಲೆ ಇದೀಗ ಬೆಂಗಳೂರು ಸಮೀಪದ ಆನೆಕಲ್ ಭಾಗದಲ್ಲಿನ ಹೈನುಗಾರರಿಗೆ ತಲೆನೋವಾಗಿ ಪರಿಣಮಿಸಿದೆ. ಆನೇಕಲ್ ತಾಲೂಕಿನ ಬಹುತೇಕ ಹಳ್ಳಿಗಳಿಗೆ ಈ ಕಾಯಿಲೆ ಹಬ್ಬಿದ್ದು. ಇಂಡ್ಲವಾಡಿ, ಸುರಗಜಕ್ಕನಹಳ್ಳಿ, ವಣಕನಹಳ್ಳಿ,ದಿನ್ನೂರು ಸೇರಿ ಹಲವೆಡೆ ರಾಸುಗಳು ಸಾವಿಗೀಡಾಗಿವೆ.



**ರೋಗ ಲಕ್ಷಣಗಳೇನು? :** ಪ್ರಾರಂಭದಲ್ಲಿ ಹಸುವಿನ ಕಿವಿ ಸೋರಲು ಪ್ರಾರಂಭ ಆಗುತ್ತದೆ. ಬಳಿಕ ಅದಕ್ಕೆ ತಲೆ ನೋವು ಕಾಣಿಸಿಕೊಂಡು ಸೊರಗುತ್ತದೆ. ಇದಾದ ಮೇಲೆ ಮೂಗು, ಬಾಯಿ, ಕಿವಿ ಕೂಡ ಸೋರಲು ಪ್ರಾರಂಭ ಆಗುತ್ತದೆ. ಕಳೆದ ವರ್ಷ ಇದೇ ವೈರಲ್ ಕಾಯಿಲೆಯನ್ನು ವಿಜ್ಞಾನಿಗಳು ಒಅಈ ಎಂದು ಕರೆದಿದ್ದರು. ಈ ಕಾಯಿಲೆಗೆ ನಿರ್ದಿಷ್ಟ ಔಷದ ಇಲ್ಲದೇ ರೈತರು ಪರದಾಡುತ್ತಿರುವುದು ಮಾತ್ರ ಸುಳ್ಳಲ್ಲ.

**ಕಾಯಿಲೆ ಕಾಣಿಕೊಂಡಾಗ ರೈತರು ಏನುಮಾಡಬೇಕು?:** ಮೇಲೆ ಹೇಳಿರುವ ರೋಗ ಲಕ್ಷಣಗಳು ನಿಮ್ಮ ಹಸುವಿನಲ್ಲೂ ಕಾಣಿಸಿಕೊಂಡರೆ ಏನು ಮಾಡಬೇಕು? ರೈತರು ಎಚ್ಚರ ವಹಿಸಬೇಕಾದ ಕ್ರಮಗಳು ಹೀಗಿವೆ:

ಪಶು ವೈದ್ಯರು ಹೇಳುವಂತೆ, ಕಾಯಿಲೆ ಕಾಣಿಸಿಕೊಂಡಾಗ ಹಸುವನ್ನು ಪ್ರತ್ಯೇಕವಾಗಿ ಕಟ್ಟಿಹಾಕಬೇಕು.ವೈದ್ಯರಿಂದ ನಿರಂತರ ಚಿಕಿತ್ಸೆ ನೀಡಿಸಬೇಕು. ಹಸುವಿಗೆ ವೈದ್ಯರಿಂದ ಆಂಟಿ ಬಯೋಟೆಕ್, ಐವರ್ ಮೆಕ್ಟೀನ್ ಎಂಬ ಇಂಜೆಕ್ಷನ್ ಕೊಡಿಸಬೇಕು.




## ಫಾಸ್ಟ್ ನ್ಯೂಸ್

### ಸಹಾಯ ಧನಕ್ಕಾಗಿ ಅರ್ಜಿ

» ಚಿತ್ರದುರ್ಗ

ನಗರದ ಆಶಾಕಿರಣ ಸಂಸ್ಥೆಯವತಿಯಿಂದ 2022-23ನೇ ಸಾಲಿನಲ್ಲಿ 10ನೇ ತರಗತಿಯಲ್ಲಿ ಶೇ.85ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದಿರುವ ಆಸಕ್ತ ಪ್ರತಿಭಾನ್ವಿತ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಸಹಾಯ ಧನಕ್ಕಾಗಿ ಅರ್ಜಿಯನ್ನು ಆಹ್ವಾನಿಸಿದೆ ಎಂದು ಸಂಸ್ಥೆಯ ಮುಖ್ಯಸ್ಥರಾದ ಮಧುಪ್ರಸಾದ್ ತಿಳಿಸಿದ್ದಾರೆ. ಚಿತ್ರದುರ್ಗ ಜಿಲ್ಲೆಯವರು ಮಾತ್ರ ಅರ್ಜಿಯನ್ನು ಸಲ್ಲಿಸಬೇಕಿದೆ. ಅರ್ಜಿಯನ್ನು ಸಲ್ಲಿಸಲು ಕೋನೆಯ ದಿನಾಂಕ 20-07-2023 ಆಗಿದೆ. ಹೆಚ್ಚಿನ ಮಾಹಿತಿ ಹಾಗೂ ಅರ್ಜಿಗಳಿಗಾಗಿ ಆಶಾಕಿರಣ, ಅತುಲ್ಯಂ, ಡಿಸಿಬಿ ಬ್ಯಾಂಕ್ ಕಳೆಭಾಗ, ವಿ.ಪಿ.ಬಡಾವಣೆ ಮುಖ್ಯ ರಸ್ತೆ, ಚಿತ್ರದುರ್ಗ ದೂರವಾಣಿ ಸಂಖ್ಯೆ 9448094848, 9591755333 ಸಂಪರ್ಕ ಮಾಡಬಹುದಾಗಿದೆ ಎಂದು ತಿಳಿಸಿದ್ದಾರೆ.

### ಪ್ರಾಚಾರ್ಯ ರಂಗಪ್ಪ ವರ್ಗಾವಣೆ ವದಂತಿ

» ಚಳ್ಳಕೆರೆ



ನಗರದ ಪ್ರತಿಷ್ಠಿತ ಎಚ್.ಪಿ.ಪಿ.ಸಿ.ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಆರ್.ರಂಗಪ್ಪ ಅವರ ವರ್ಗಾವಣೆಯ ವದಂತಿ ಹರಡಿದ್ದು ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಕಳೆದ 6ತಿಂಗಳಹಿಂದೆ ಚಳ್ಳಕೆರೆ ನಗರದ ಪ್ರತಿಷ್ಠಿತ ಹೆಚ್.ಪಿ.ಪಿ.ಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಪ್ರಾಚಾರ್ಯರಾಗಿ ಆಗಮಿಸಿದ ಇವರು ಕಾಲೇಜನ್ನು ಸರ್ವತೋಮುಖ ಅಭಿವೃದ್ಧಿಯತ್ತ ಕೊಂಡೊಯ್ಯಲು ಶ್ರಮಿಸುತ್ತಿದ್ದಾರೆ. ಅಪಾರವಾದ ಭೋದನಾ ಅನುಭವ, ನುರಿತ ಆಡಳಿತ ಅನುಭವವು ಕಾಲೇಜನ್ನು ಪ್ರಗತಿಪಥದತ್ತ ತೆಗೆದುಕೊಂಡು ಹೋಗಲು ಸಹಕಾರಿಯಾಗುತ್ತಿದೆ. ಕಾಲೇಜಿಗೆ ಪ್ರಾಚಾರ್ಯರಾಗಿ ಪದೋನ್ನತಿಯಾಗಿ ಬಂದು ಕೆಲವೇ ದಿನಗಳಲ್ಲಿ ರಾಷ್ಟ್ರಮಟ್ಟದ ನ್ಯಾಕ್ ಸಮಿತಿಯ ಪರಿಶೀಲನೆಯನ್ನು ಅತ್ಯಂತ ಯಶಸ್ವಿಯಾಗಿ ನಿಭಾಯಿಸಿದರು. ನಂತರ ದಾವಣಗೆರೆ ವಿಶ್ವವಿದ್ಯಾನಿಲಯದ ಪದವಿ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಿ ಉತ್ತಮವಾದ ಪಲಿತಾಂಶಕ್ಕೆ ಸಾಕ್ಷಿಯಾದರು. ಕಾಲೇಜಿನಲ್ಲಿ ಪಠ್ಯ ಕಲಿಕೆಯ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಕಾಲೇಜು ಉತ್ತಮ ಪ್ರಗತಿ ಸಾಧಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ.ಸ್ಕೌಟ್ ಅಂಡ್ ಗೈಡ್, ಎನ್.ಎಸ್.ಎಸ್, ರೇಂಜರ್ಸ್ ಅಂಡ್ ರೋವರ್ಸ್ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಕಾಲೇಜಿನ ಹಲವು ವಿದ್ಯಾರ್ಥಿಗಳು ಸಾಧನೆಯ ಹಾದಿಯಲ್ಲಿದ್ದಾರೆ. ಇದರಿಂದ ಚಳ್ಳಕೆರೆ ಕ್ಷೇತ್ರದ ಅಭಿವೃದ್ಧಿ ಹರಿಕಾರರಾದ ಶಾಸಕ ಟಿ. ರಘುಮೂರ್ತಿಯವರ ಆಶೋತ್ತರಗಳಿಗೆ ತಕ್ಕಂತೆ ಕೆಲಸ ಮಾಡಿ ಕೆಲವೇ ದಿನಗಳಲ್ಲಿ ಅವರ ಪ್ರಶಂಸೆಗೂ ಪಾತ್ರವಾಗಿರುವ ಇವರು ಕಾಲೇಜನ್ನು ಇನ್ನೂ ಉತ್ತಮವಾದ ವಿಧಾನಗಳು, ಹೊಸ ಕೋರ್ಸ್‌ಗಳ ಆರಂಭದ ಮೂಲಕ ರಾಜ್ಯದಲ್ಲಿಯೇ ಮಾದರಿ ಕಾಲೇಜನ್ನಾಗಿ ಮಾಡುವ ಪಣತೊಟ್ಟಿದ್ದಾರೆ.ಪ್ರಸ್ತುತ ಕಾಲೇಜಿನಲ್ಲಿ ಪದವಿ ಪರೀಕ್ಷೆಗಳು ನಡೆಯುತ್ತಿವೆ. ಇಂತಹ ಸಂದರ್ಭದಲ್ಲಿ ಪ್ರಾಚಾರ್ಯರನ್ನು ಶಿರಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸರ್ಕಾರ ವರ್ಗಾವಣೆ ಮಾಡುವ ಎಂಬ ವದಂತಿ ಹಬ್ಬಿದೆ. ಕಾಲೇಜಿಗೆ ಕೇವಲ 6ತಿಂಗಳ ಹಿಂದೆ ಪ್ರಾಚಾರ್ಯರಾಗಿ ಬಂದು ಉತ್ತಮವಾದ ಸೇವೆ ಸಲ್ಲಿಸಿರುವ ಇವರನ್ನು ಯಾವುದೇ ಕಾರಣಕ್ಕೂ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಮತ್ತು ಅಧಿಕಾರಿಗಳು ಇವರನ್ನು ವರ್ಗಾವಣೆ ಮಾಡಬಾರದು ಎಂದು ಕಾಲೇಜಿನ ವಿದ್ಯಾರ್ಥಿಗಳು ಒತ್ತಾಯಿಸಿದ್ದಾರೆ.

### ಚಿಕನ್ ಸೇವಿಸಿ 30 ಮಕ್ಕಳು ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲು

» ಚಾಮರಾಜನಗರ

ಚಿಕನ್ ಸೇವಿಸಿದ ಮಕ್ಕಳು ವಾಂತಿ, ಬೇಧಿಯಾಗಿ ಅಸ್ವಸ್ಥಗೊಂಡಿರುವ ಘಟನೆ ಗುಂಡ್ಲುಪೇಟೆ ತಾಲೂಕಿನ ಯಡವನಹಳ್ಳಿ ಗ್ರಾಮದ ಮೊರಾರ್ಜಿ ವಸತಿ ಶಾಲೆಯಲ್ಲಿ ಭಾನುವಾರ ರಾತ್ರಿ ನಡೆದಿದೆ. ಒಟ್ಟು 30 ವಿದ್ಯಾರ್ಥಿಗಳು ತೀವ್ರ ಅಸ್ವಸ್ಥರಾಗಿದ್ದು, 15 ಮಂದಿಗೆ ಬೇಗೂರು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಶಿಕ್ಷಣ ಇಲಾಖೆ ಅಧಿಕಾರಿಗಳು, ಪೊಲೀಸರು ಆಸ್ಪತ್ರೆಗೆ ಭೇಟಿ ನೀಡಿ ಮಕ್ಕಳ ಆರೋಗ್ಯ ವಿಚಾರಿಸಿದ್ದಾರೆ.

### ಅಕ್ರಮ ವಿದ್ಯುತ್ ತಂತಿ ಬೇಲಿಗೆ ಬಲಿಯಾದ ಒಂಟಿ ಸಲಗ

» ಚಾಮರಾಜನಗರ

ಅಕ್ರಮವಾಗಿ ಜಮೀನಿಗೆ ಅಳವಡಿಸಿದ್ದ ವಿದ್ಯುತ್ ಬೇಲಿ ತಗುಲಿ ಒಂಟಿ ಸಲಗ ಸಾವನ್ನಪ್ಪಿರುವ ಘಟನೆ ಜಿಲ್ಲೆಯ ಗುಂಡ್ಲುಪೇಟೆ ತಾಲೂಕು ಕುರುಬರಹುಂಡಿ ಗ್ರಾಮದಲ್ಲಿ ನಡೆದಿದೆ. ಬೆಳೆ ರಕ್ಷಣೆಗೆಂದು ಜಮೀನಿನ ತಂತಿ ಬೇಲಿಗೆ ಮಾಲೀಕ ಶಿವಾರಾಜು ಅಕ್ರಮವಾಗಿ ವಿದ್ಯುತ್ ಸಂಪರ್ಕ ಕಲ್ಪಿಸಿದ್ದನು. ಸ್ಥಳಕ್ಕೆ ಅರಣ್ಯಾಧಿಕಾರಿಗಳ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನೆ ಬಳಿಕ ಆರೋಪಿ ಜಮೀನು ಮಾಲೀಕ ಶಿವರಾಜು ಪರಾರಿಯಾಗಿದ್ದಾನೆ. ಆರೋಪಿಗಾಗಿ ಅರಣ್ಯಾಧಿಕಾರಿಗಳ ಶೋಧ ಕಾರ್ಯ ನಡೆಸಿದ್ದಾರೆ.

# ಗ್ರಾಮಗಳಲ್ಲೂ ಗುಣಮಟ್ಟದ ರಸ್ತೆ ಶಾಸಕ ರಾಜ್ಯದಲ್ಲಿ ಯಾರಾದರೂ ಇದ್ದರೇ ಅದು ಚಂದ್ರಪ್ಪ: ಸಿದ್ದೇಶ್ವರ್







» ಹೊಳಲ್ಕೆರೆ

ಕ್ಷೇತ್ರಾದ್ಯಂತ ಎಲ್ಲಾ ಗ್ರಾಮಗಳಲ್ಲೂ ಗುಣಮಟ್ಟದ ರಸ್ತೆ ಮಾಡಿಸಿರುವ ಶಾಸಕ ರಾಜ್ಯದಲ್ಲಿ ಯಾರಾದರೂ ಇದ್ದರೇ ಅದು ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಎಂದು ದಾವಣಗೆರೆ ಸಂಸದ ಜಿ.ಎಂ.ಸಿದ್ದೇಶ್ವರ್ ಗುಣಗಾನ ಮಾಡಿದರು.

ಪಟ್ಟಣದಲ್ಲಿರುವ ಸಂವಿಧಾನ ಸೌಧದಲ್ಲಿ ತಾಲ್ಲೂಕು ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಶಾಸಕ ಚಂದ್ರಪ್ಪ ಮತ್ತು ಅವರ ಪತ್ನಿ ಚಂದ್ರಕಲಾ ಪುತ್ರ ರಘುಚಂದನ್ ಇವರುಗಳು ಕೂಡ ಜನ ಸೇವೆಗೆ ನಿಂತಿದ್ದಾರೆ. ತಾಲ್ಲೂಕಿನಾದ್ಯಂತ ವಸತಿ ಶಾಲೆ, ಮುರಾರ್ಜಿ ದೇಸಾಯಿ ಶಾಲೆ, ಬಸ್ ನಿಲ್ದಾಣ ಇವೆಲ್ಲವನ್ನು ಶಾಸಕ ಚಂದ್ರಪ್ಪ ಗುಣಮಟ್ಟದಿಂದ ನಿರ್ಮಿಸಿದ್ದಾರೆ. ಹಾಗಾಗಿ ಮೊದಲನೇ ಬಾರಿ ಭರಮಸಾಗರ ವಿಧಾನಸಭಾ ಕ್ಷೇತ್ರದಿಂದ ಗೆದ್ದು ರಸ್ತೆ ರಾಜ ಎಂಬ ಬಿರುದು ಪಡೆದುಕೊಂಡರು. ಚಂದ್ರಪ್ಪ ಮಾಡಿರುವ ಕೆಲಸಗಳು ಎಲ್ಲಾ ಕಡೆ ಕಣ್ಣಿಗೆ ಕಾಣುತ್ತಿದೆ. ಆದರೂ ಈ ಬಾರಿಯ ವಿಧಾನ ಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಘೋಷಿಸಿದ 5 ಗ್ಯಾರಂಟಿಗಳಿಗೆ ಮನಸೋತು ರಾಜ್ಯದಿಂದ ಕಾಂಗ್ರೆಸ್‌ಗೆ ಸ್ಪಷ್ಟ ಬಹುಮತ ನೀಡಿದ್ದರಿಂದ ನಮ್ಮ ಪಕ್ಷ ಅಧಿಕಾರ ಕಳೆದುಕೊಳ್ಳಬೇಕಾಯಿತು ಎಂದು ಹೇಳಿದರು.

ಶಿಕಾರಿಪುರ ಶಾಸಕ ಬಿ.ಜೆ.ಪಿ ರಾಜ್ಯ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಸನ್ಮಾನ ಸ್ವೀಕರಿಸಿ ಮಾತನಾಡುತ್ತ ಶಾಸಕ ಎಂ.ಚಂದ್ರಪ್ಪ ನಾಲ್ಕವರೆ ಸಾವಿರ ಕೋಟಿ ರೂಗಳ ಅನುದಾನ ತಂದು ಹೊಳಲ್ಕೆರೆ ಕ್ಷೇತ್ರದ ಇತಿಹಾಸದಲ್ಲಿಯೇ ಯಾರು ಮಾಡದಂತಹ ಅಭಿವೃದ್ಧಿಯನ್ನು ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಭಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತದೆಂದು ಯಾರು ನಿರೀಕ್ಷಿಸಿರಲಿಲ್ಲ. ಚುನಾವಣಾ ಪೂರ್ವದಲ್ಲಿಯೇ 5 ಗ್ಯಾರಂಟಿಗಳನ್ನು ಘೋಷಿಸಿ ಜನರನ್ನು ಮರಳು ಮಾಡಿ ಅಧಿಕಾರಕ್ಕೆ ಬಂದಿದೆ. ಆದರೆ ಅಧಿಕಾರ ಶಾಶ್ವತವಲ್ಲ ಎನ್ನುವುದನ್ನು ಕಾಂಗ್ರೆಸ್ ಅರ್ಥಮಾಡಿಕೊಳ್ಳಬೇಕೆಂದು ಕುಟುಕಿದರು.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಜೆಟ್ ಮಂಡಿಸುವಾಗ ದೇಶದ ಪ್ರಧಾನಿ ಮೋದಿರವರನ್ನು ಟೀಕಿಸಿದ್ದು, ಅವರಿಗೆ ಶೋಬೆಯಲ್ಲ. ಜಗತ್ತಿನ 26 ರಾಷ್ಟ್ರಗಳು ಪ್ರಧಾನಿ ಮೋದಿಯನ್ನು ಗೌರವಿಸುತ್ತಿದೆ. ಕೋವಿಡ್ ಸಂದರ್ಭದಲ್ಲಿ ದೇಶದ 130 ಕೋಟಿ ಜನರಿಗೆ ಉಚಿತ ಲಸಿಕೆ ಹಾಗೂ ಅಕ್ಕಿ ನೀಡಿ ಕಾಪಾಡಿದ್ದಾರೆ. ಈ ದೇಶದ ಉಜ್ವಲ ಭವಿಷ್ಯ ಮೋದಿರವರ ಅಭಿವೃದ್ಧಿ ಮೇಲೆ ನಿಂತಿದೆ. ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಎಲ್ಲಾ ವರ್ಗದವರ ಹಿತ ಕಾಪಾಡಿದ್ದಾರೆಂದು ಹೇಳಿದರು.

ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಸನ್ಮಾನ ಸ್ವೀಕರಿಸಿ ಮಾತನಾಡಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿ ನನ್ನ ಕರ್ತವ್ಯ ಮತ್ತು ಜವಾಬ್ದಾರಿ ಎಂದು ತಿಳಿದು ಹಗಲು ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ. ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ನನ್ನ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನೀಡಿ ಅಭಿವೃದ್ಧಿಗೆ ಸಹಕರಿಸಿದ್ದಾರೆ. ಅದೇ ರೀತಿ ಬೊಮ್ಮಾಯಿ ರವರು ಮುಖ್ಯಮಂತ್ರಿಯಾಗಿದ್ದಲೂ ನನಗೆ ಅನುದಾನ ನೀಡಿದರು. ರಾಜ್ಯದಲ್ಲಿ ಕಾಂಗ್ರೆಸ್ 5 ಗ್ಯಾರೆಂಟಿಗಳನ್ನು ಘೋಷಿಸಿ ಅಧಿಕಾರಕ್ಕೆ ಬಂದಿದೆ. ಆದರೆ ಬಹಳ ಜನ ಅಧಿಕಾರದಲ್ಲಿ ಉಳಿಯುವುದಿಲ್ಲ. ಕಾರ್ಯಕರ್ತರು ಯಾರು ಎದೆಗುಂದುವುದು ಬೇಡ ಎಂದು ಧೈರ್ಯ ತುಂಬಿದರು.

ಕ್ಷೇತ್ರದಲ್ಲಿ ಎಲ್ಲಿಯೂ ಜಾತಿ ನಿಂದನೆ, ಗದ್ದಲ ಗಲಾಟೆ ಇಲ್ಲದಂತೆ ಎಲ್ಲರನ್ನು ಸಮಾನವಾಗಿ ಕಂಡಿದ್ದೇನು. ನಮ್ಮ ನಿಮ್ಮ ಸಂಬಂಧ ಕೊನೆಯುಸಿರಿರುವತನಕ ಗಟ್ಟಿಯಾಗಿರುತ್ತದೆ. ಬಾಕಿ ಇರುವ ಕೆಲಸಗಳನ್ನು ಪೂರ್ಣಗೊಳಿಸಿ ಹೊಸ ಕೆಲಸಗಳನ್ನು ಆರಂಭಿಸೋಣ ಎಂದು ಭರವಸೆ ನೀಡಿದರು.

ಮಾಜಿ ಶಾಸಕ ಮಂಜುನಾಥ, ಲಿಂಗಮೂರ್ತಿ, ಈಶ್ವರಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರು, ಶ್ರೀಮತಿ ಸುಮ ಲಿಂಗರಾಜ್, ಶ್ರೀಮತಿ ಗಾಯಿತ್ರಿ ಸಿದ್ದೇಶ್ವರ್, ಶ್ರೀಮತಿ ಚಂದ್ರಕಲಾ ಚಂದ್ರಪ್ಪ ಬಿ.ಜೆ.ಪಿ. ಯುವ ಮುಖಂಡರುಗಳಾದ ಎಂ.ಸಿ.ರಘುಚಂದನ್, ಜಿ.ಎಸ್. ಅನಿತ್‌ಕುಮಾರ್, ತಾಲ್ಲೂಕು ವೀರಶೈವ ಲಿಂಗಾಯತ ಸಮಾಜದ ಮುಖಂಡರುಗಳುಸನ್ಮಾನಸಮಾರಂಭದಲ್ಲಿ ಭಾಗವಹಿಸಿದ್ದರು.

ಪೋಟೋ ವಿವರಣೆ : ತಾಲ್ಲೂಕು ವೀರಶೈವ ಲಿಂಗಾಯತ ಸಮಾಜದ ವತಿಯಿಂದ ದಾವಣಗೆರೆ ಸಂಸದ ಜಿ.ಎಂ.ಸಿದ್ದೇಶ್ವರ್ ದಂಪತಿಗಳನ್ನು, ಶಿಕಾರಿಪುರ ಶಾಸಕ ಬಿ.ವೈ.ವಿಜಯೇಂದ್ರ, ಶಾಸಕ ಚಂದ್ರಪ್ಪ ದಂಪತಿಗಳನ್ನು ಸನ್ಮಾನಿಸಲಾಯಿತು.

# ಬ್ರಾಹ್ಮಣ ಸಮಾಜ ಅಭಿವೃದ್ಧಿ ಎಲ್ಲಾ ಸಮಾಜ ಸಹಕಾರದಿಂದ ಸಾಧ್ಯ: ಗೌತಮ್

» ಚಳ್ಳಕೆರೆ




ಸಮಾಜದ ಎಲ್ಲಾ ವರ್ಗಗಳ ಹಿತವನ್ನು ಬಯಸುವ ಬ್ರಾಹ್ಮಣ ಸಮಾಜಆರ್ಥಿಕವಾಗಿಹಿಂದುಳಿದ್ದು, ಸಮಾಜವನ್ನು ಅಭಿವೃದ್ಧಿ ಪಥದತ್ತ ಕೊಂಡ್ಯೊಯಲು ಸಮಾಜದ ಎಲ್ಲಾ ಬಂಧುಗಳು ಸಹಕಾರ ನೀಡಬೇಕು. ಸರ್ಕಾರದಿಂದ ನಿರೀಕ್ಷಿತ ಮಟ್ಟದಲ್ಲಿ ಸಮಾಜಕ್ಕೆ ಯಾವುದೆ ನೆರವು ದೊರೆಯುತ್ತಿಲ್ಲವಾದರೂ ಆರ್ಥಿಕ ಸುಧಾರಣೆಗೆ ನಾವೆಲ್ಲರೂ ಸಂಘಟಿತರಾಗಿ ಸರ್ಕಾರವನ್ನು ಎಚ್ಚರಿಸಿ,ಸೌಲಭ್ಯಪಡೆಯಬೇಕೆಂದು ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್ ಗೌತಮ್ ತಿಳಿಸಿದರು.

ಅವರು, ಭಾನುವಾರ ಗಾಯಿತ್ರಿ ಕಲ್ಯಾಣ ಮಂಟಪದಲ್ಲಿ 2022-23ನೇ ಸಾಲಿನ ಸರ್ವಸದಸ್ಯರ ಸಭೆಯನ್ನು ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಸ್ತುತ ಬ್ರಾಹ್ಮಣ ಸಮಾಜದ ವತಿಯಿಂದ ಕೆಲವೊಂದು ಉಪಯುಕ್ತ ಯೋಜನೆಗಳಿಗೆ ಚಿಂತನೆ ನಡೆದಿದೆ. ಕಲ್ಯಾಣ ಮಂಟಪದ ಆವರಣದಲ್ಲಿ ವಾಣಿಜ್ಯ ಮಳಿಗೆಗಳ ನಿರ್ಮಾಣ, ಕಾಂಪೌಂಡ್ ನಿರ್ಮಾಣ, ಮುಕ್ತಿಧಾಮ ಅಭಿವೃದ್ಧಿ ಹೀಗೆ ಸಾಲು, ಸಾಲು ಕೆಲಸಗಳು ನಮ್ಮ ಮುಂದಿವೆ. ಎಲ್ಲರ ಸಹಕಾರದಿಂಧ ಹಂತ, ಹಂತವಾಗಿ ಸಮಾಜವನ್ನು ಪ್ರಗತಿಯತ್ತ ಕೊಂಡೊಯಲು ಪ್ರಾಮಾಣಿಕವಾಗಿ ಕಾರ್ಯ ಮಾಡಲಾಗುವುದು.

ಗೌರವಾಧ್ಯಕ್ಷ ಎಂ.ವಾಸು ದೇವರಾವ್ ಮಾತನಾಡಿ, ಸಮಾಜ ಆರ್ಥಿಕವಾಗಿ ಹಿಂದುಳಿದ ಸಮಾಜದ ಬಂಧುಗಳಿಗೆ ನೆರವು ಕಲ್ಪಿಸುವ ನಿಟ್ಟಿನಲ್ಲಿ ಬ್ರಾಹ್ಮಣ ಸಮಾಜದ ಅಭಿವೃದ್ಧಿ ನಿಗಮದ ಅಧ್ಯಕ್ಷರಿಗೆ ಮನವಿ ಮಾಡಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಧಾನ ಕಾರ್ಯದರ್ಶಿ ಎಂ. ಸತ್ಯನಾರಾಯಣರಾವ್, ಖಜಾಂಚಿ ಡಿ.ಕೃಷ್ಣಮೂರ್ತಿ, ಮಹಿಳಾ ಘಟಕದ ಅಧ್ಯಕ್ಷತೆ ಸೀತಾಲಕ್ಷ್ಮಿವಾದಿರಾಜ್, ಗೌರವಾಧ್ಯಕ್ಷೆ ಜಯಲಕ್ಷ್ಮಿಸುಬ್ಬಣ್ಣ, ನಿರ್ದೇಶಕರಾದ ಶಿವಕುಮಾರ್, ಸಿ.ಎಸ್.ಗೋಪಿನಾಥ, ಮುರ 'ಳೀಧರ, ಪ್ರದೀಪ್‌ಶರ್ಮ, ಶ್ರೀನಾಥ, ಶಾಂತಮ್ಮ, ಶೈಲಜಾ, ಯು. ಎಸ್.ವಿಷ್ಣುಮೂರ್ತಿರಾವ್, ಮಾಜಿ ಅಧ್ಯಕ್ಷ ತ್ಯಾಗರಾಜು, ಡಿ.ಜಿ.ಪ್ರಕಾಶ್, ಮಲ್ಲಿಕಾರ್ಜುನ ಶ್ರೀವತ್ಸ, ಸತ್ಯನಾರಾಯಣ ಮುಂತಾದವರು ಉಪಸ್ಥಿತರಿದ್ದರು.

# ಕಿರು ವಿಜ್ಞಾನ ಪ್ರಯೋಗಾಲಯ ಉದ್ಘಾಟನೆ



■ ಜನಾಶಯಪ್ರಭ ಭೀಮಸಮುದ್ರ

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ವಿದ್ಯಾರ್ಥಿಗಳು ತಮ್ಮನ್ನು ತಾವು ಹೆಚ್ಚು ತೊಡಗಿಸಿಕೊಳ್ಳಲು ಪ್ರಯೋಗಶಾಲೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ರಾಜ್ಯ ಸಮಿತಿ ಸದಸ್ಯರಾದ ಎಚ್.ಎಸ್.ಟಿ.ಸ್ವಾಮಿ ಎಂದು ತಿಳಿಸಿದರು.

ತಾಲ್ಲೂಕಿನ ಭೀಮಸಮುದ್ರದ ಶ್ರೀ ಭೀಮೇಶ್ವರ ಗ್ರಾಮಾಂತರ ಪ್ರೌಢಶಾಲೆಯಲ್ಲಿ, ವೇದಾಂತ ಮೈನ್ಸ್, ಬೆಂಗಳೂರಿನ ಸ್ಟೆಮ್ ಲರ್ನಿಂಗ್ ಸಂಸ್ಥೆಗಳ ಆಶ್ರಯದಲ್ಲಿ ಏರ್ಪಡಿಸಿದ್ದ ಕಿರು ವಿಜ್ಞಾನ ಪ್ರಯೋಗಾಲಯ ಮತ್ತು ಕಂಪ್ಯೂಟರ್ ಕೊಠಡಿಗಳನ್ನು ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನವನ್ನು ಪಠ್ಯದ ಮೂಲಕ ಕಲಿಯುವುದಕ್ಕಿಂತಲೂ, ಪ್ರಯೋಗಶಾಲೆಯಲ್ಲಿ ಕಲಿಯುವ ವಿಜ್ಞಾನ ಮಕ್ಕಳ ಬುದ್ಧಿಮತ್ತೆಯನ್ನು ಹೆಚ್ಚಿಸುತ್ತದೆ. ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು. ಈ ಕಾರ್ಯದಲ್ಲಿ ಶಿಕ್ಷಕರ ಪಾತ್ರ ಅತಿ ಮುಖ್ಯ" ಎಂದು ಹೇಳಿದರು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಬಿ.ಟಿ.ಪುಟ್ಟಪ್ಪ ಮಾತನಾಡಿ, ಶಾಲಾ ಮಕ್ಕಳು ಪ್ರಯೋಗಶಾಲೆಯನ್ನು ಉತ್ತಮವಾಗಿ ಸದುಪಯೋಗಪಡಿಸಿಕೊಳ್ಳಿ" ಎಂದರು.ವೇದಾಂತ ಮೈನ್ಸ್‌ನ ರವಿ ಮಾತನಾಡಿ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ಅತ್ಯವಶ್ಯಕ ಎಂದು ಹೇಳಿದರು.ಸಲಹಾ ಸಮಿತಿ ಸದಸ್ಯ ಕಲ್ಲಪ್ಪ, ದೇವಕುಮಾರ್, ವೇದಾಂತ ಮೈನ್ಸ್‌ನ ರವಿ, ಭಾಗ್ಯಜ್ಯೋತಿ, ಸ್ಟೆಮ್ ಲರ್ನಿಂಗ್ ಸಂಸ್ಥೆಯ ಮಹೇಶ್, ಪ್ರವೀಣ್ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಮಕ್ಕಳಲ್ಲಿ ಆತ್ಮ ವಿಶ್ವಾಸ ಅತಿ ಮುಖ್ಯ: ಸ್ವಾಮೀಜಿ

» ಚಿತ್ರದುರ್ಗ



ಮಕ್ಕಳಲ್ಲಿ ಸಮಸ್ಯೆ ಬಂದಾಗ ಅದನ್ನು ಎದುರಿಸುವ ಆತ್ಮಸ್ಥೈರ್ಯವನ್ನು ತುಂಬುವಂತ ಕಾರ್ಯವಾಗಬೇಕಿದೆ. ಇಂದಿನ ದಿನಮಾನದಲ್ಲಿ ಸಣ್ಣ ಸಣ್ಣ ವಿಷಯಕ್ಕೂ ಸಹಾ ವಿದ್ಯಾರ್ಥಿಗಳು ಆತ್ಮಹತ್ಯೆಯಂತಹ ದಾರಿಯನ್ನು ಹಿಡಿಯುತ್ತಿದ್ದಾರೆ, ಇದರಿಂದ ಹೊರ ಬರಬೇಕಾದರೆ ಅವರಲ್ಲಿ ಆತ್ಮವಿಶ್ವಾಸ ಅತಿ ಮುಖ್ಯವಾಗಿದೆ ಎಂದು ಶ್ರೀ ಜಗದ್ಗುರು ಮುರುಘಾರಾಜೇಂದ್ರ ಬೃಹನ್ಮಠದ ಶ್ರೀ ಬಸವಪ್ರಭುಸ್ವಾಮಿಗಳು ತಿಳಿಸಿದರು.

ನಗರದ ವೀರಶೈವ ಸಮಾಜದವತಿಯಿಂದ ನಗರದ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಭಾನುವಾರ ಎಸ್.ಎಸ್.ಎಲ್.ಸಿ., ಪಿ.ಯುಸಿ., ಪದವಿ, ಸ್ನಾತಕೋತ್ತರ ಪದವಿಯಲ್ಲಿ ಡಿಸ್ಟಿಂಕ್ಷನ್ ಹಾಗೂ ಪಿ.ಎಚ್‌ಡಿ. ಪದವಿ ಪಡೆದ ಪ್ರತಿಭಾನ್ವಿತ ವೀರಶೈವ ಲಿಂಗಾಯತ ಸಮಾಜದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಓದುವಾಗ ಸೂಕ್ಷ್ಮವಾಗಿ ಇರಬೇಕಿದೆ, ದಾರಿಯನ್ನು ತಪ್ಪಬಾರದು, ಪೋಷಕರು ನಿಮ್ಮ ಓದಿಗಾಗಿ ಹಗಲಿರಳು ಶ್ರಮವನ್ನು ಹಾಕುತ್ತಾರೆ, ಇದರ ಬಗ್ಗೆ ಅರಿವು ಇರಬೇಕಿದೆ, ಇಂದಿನ ದಿನಮಾನದಲ್ಲಿ ಮನೆಯಲ್ಲಿ ಒಬ್ಬರೆ ಮಕ್ಕಳು ಇರುವುದರಿಂದ ಅತಿಯಾದ ಮುದ್ದು ಮಾಡುತ್ತಾರೆ, ಇದರಿಂದ ಮಕ್ಕಳು ಕೇಳಿದ್ದನ್ನೆಲೆ ಕೊಡಿಸುತ್ತಾರೆ, ಇದರಿಂದ ಮಕ್ಕಳು ದಾರಿಯನ್ನು ತಪ್ಪಲು ಸಹಾಯವಾಗುತ್ತದೆ. ಪೋಷಕರ ಮುದ್ದಿನಿಂದಾಗಿ ಮಕ್ಕಳು ದಾರಿ ತಪ್ಪುತ್ತಿದ್ದಾರೆ. ನಾವು ಓದುವಾಗ ಈ ರೀತಿಯಾದ ಸೌಲಭ್ಯ ಇರಲಿಲ್ಲ, ಬಹಳ ಕಷ್ಟದಿಂದ ಆಬ್ಯಾಸವನ್ನು ಮಾಡಲಾಯಿತು, ಈಗ ನಾವು ಉತ್ತಮವಾದ ಜೀವನವನ್ನು ನಡೆಸಲು ಸಾಧ್ಯವಾಯಿತು ಎಂದರು.

ಇಂದಿನ ದಿನಮಾನದಲ್ಲಿ ವಿದ್ಯಾರ್ಥಿಗಳಿಗೆ ಸಮಸ್ಯೆಯನ್ನು ಎದುರಿಸುವ ಬಗ್ಗೆ ತಿಳಿಸಬೇಕಿದೆ ಏಕೆಂದರೆ ಸಣ್ಣ-ಪುಟ್ಟ ವಿಷಯಗಳಿಗೂ ಸಹಾ ಆತ್ಮಹತ್ಯೆಯ ದಾರಿಯನ್ನು ಹಿಡಿಯುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಜೀವನದ ಪಾಠವನ್ನು ತಿಳಿಸುವುದರ ಮೂಲಕ ಅವರನ್ನು ಸರಿದಾರಿಗೆ ತರಬೇಕಿದೆ. ಜೀವನದಲ್ಲಿ ಬರುವಂತ ವಿವಿಧರೀತಿಯ ಸವಾಲುಗಳನ್ನು ತಿಳಿಸಿ ಅದನ್ನು ಯಾವ ರೀತಿಯಲ್ಲಿ ಎದುರಿಸಬೇಕೆಂದು ಪೋಷಕರಾದವರು ಕಲಿಸಬೇಕಿದೆ. ಇಂದಿನ ದಿನದಲ್ಲಿ ಮೋಬೈಲ್ ಬಳಕೆ ಹೆಚ್ಚಾಗಿದೆ ಇದರಿಂದ ಸಂಬಂಧಗಳು ಹಾಳಾಗಿವೆ. ಯಾವುದಕ್ಕೂ ಸಮಯ ಇಲ್ಲ ಎಂಬ ಮಾತು ಇಂದಿನ ದಿನದಲ್ಲಿ ಸಹಜವಾಗಿದೆ ಎಂದು ಶ್ರೀಗಳು ತಿಳಿಸಿದರು.

ನಮ್ಮ ಶರಣರು, ದಾರ್ಶನಿಕರು ಹಲವಾರು ವಚನವನ್ನು ನೀಡಿದ್ದಾರೆ ಅವುಗಳನ್ನು ಓದುವುದರ ಮೂಲಕ ನಮ್ಮ ಸಮಸ್ಯೆಗೆ ಪರಿಹಾರವನ್ನು ಕಂಡುಕೊಳ್ಳಬಹುದಾಗಿದೆ. ಮಕ್ಕಳಲ್ಲಿ ಪ್ರತಿಭೆ ಆಗಾಧವಾಗಿದೆ ಅದರ ಬಳಕೆ ಸರಿಯಾದ ರೀತಿಯಲ್ಲಿ ಆಗಬೇಕಿದೆ ವಿದ್ಯಾರ್ಥಿಗಳಾದವರು ಸಹಾ ತಮ್ಮ ಮುಂದಿನ ಗುರಿಯನ್ನು ಈಗಲೇ ಸಿದ್ದ ಪಡಿಸಿಕೊಳ್ಳಬೇಕಿದೆ ಅಲ್ಲದೆ ಅದಕ್ಕೆ ಬೇಕಾದ ತಯಾರಿಯನ್ನು ಸಹಾ ಮಾಡಿಕೊಳ್ಳಬೇಕಿದೆ ಆಗ ಮಾತ್ರ ಗುರಿಯನ್ನು ಸಾಧಿಸಲು ಸಾಧ್ಯವಿದೆ. ಈ ಸಮಯದಲ್ಲಿ ಮನಸ್ಸು ಚಂಚಲವಾಗಿರುತ್ತದೆ ಅದಕ್ಕೆ ಕಡಿವಾಣವನ್ನು ಹಾಕುವುದರ ಮೂಲಕ ಮನಸ್ಸ್‌ನ್ನು ನಿಯಂತ್ರಿಸಬೇಕಿದೆ. ನಕರಾತ್ಮಕವಾದ ಚಿಂತನೆಯನ್ನು ಬಿಟ್ಟು ಸಕರಾತ್ಮಕವಾದ ಚಿಂತನೆಯನ್ನು ರೂಢಿಸಿಕೊಳ್ಳಿ, ಸತತವಾದ ಪರಿಶ್ರಮದಿಂದ ಮಾತ್ರ ಜ್ಞಾನಿಯಾಗಲು ಸಾಧ್ಯವಿದೆ ಅದೇ ರೀತಿ ಕಷ್ಟಪಟ್ಟು ದುಡಿದಾಗ ಮಾತ್ರ ಶ್ರೀಮಂತನಾಗಲು ಸಾಧ್ಯವಿದೆ ಎಂದು ಶ್ರೀ ಬಸವಪ್ರಭುಸ್ವಾಮಿಗಳು ಕಿವಿ ಮಾತು ಹೇಳಿದರು. ಶಾಸಕ ವಿರೇಂದ್ರರವರ ಸಹೋದರರಾದ ನಾಗರಾಜ್ ಮಾತನಾಡಿ, ಈ ದಿನದಲ್ಲಿ ಪ್ರತಿಭಾ ಪುರಸ್ಕಾರಕ್ಕೆ ಭಾಗಿಯಾದವರು ಮುಂದಿನ ದಿನದಲ್ಲಿ ಈ ಪುರಸ್ಕಾರವನ್ನು ಜ್ಞಾಪಿಸಿಕೊಂಡು ಬೇರೆಯವರಿಗೆ ಸಹಾಯವನ್ನು ಮಾಡಿ, ಇದರಿಂದ ಅವರು ಸಹಾ ನಿಮ್ಮಂತೇ ಪುರಸ್ಕಾರವನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

# ಸಾಮಾಜಿಕ ಕಾರ್ಯದ ಮೂಲಕ ರೋಟರಿ ಜನಮನ್ನಣೆಗಳಿಸಿದೆ: ರಘುಮೂರ್ತಿ

» **ಚಳ್ಳಕೆರೆ**

ಸಾಮಾಜಿಕ ಸೇವಾ ಚಟುವಟಿಕೆಗಳ ಮೂಲಕ ಸಮಾಜದ ಎಲ್ಲಾ ವರ್ಗದ ಜನರಿಗೆ ನೆರವು ಕಲ್ಪಿಸುವ ನೆರವು ಕಲ್ಪಿಸುವ ಅಂತರಾಷ್ಟ್ರೀಯ ಸಂಸ್ಥೆಯ ಸಾಲಿನಲ್ಲಿ ರೋಟರಿ ಮತ್ತು ಇನ್ನರ್ ವೀಲ್ ಕ್ಲಬ್‌ಗಳು ಪ್ರಧಾನ ಸ್ಥಾನ ಪಡೆದಿವೆ. ಸಮಾಜದ ಎಲ್ಲಾ ವರ್ಗದ ಜನರು ಈ ಸಂಸ್ಥೆಯ ನೆರವು ಪಡೆಯುವಲ್ಲಿ ಮುಂದಾಗಬೇಕೆಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ರೋಟರಿ ಬಾಲ ಭವನದಲ್ಲಿ ರೋಟರಿ, ಇನ್ನರ್‌ವೀಲ್ ಕ್ಲಬ್‌ಗಳ ನೂತನ ಪದಾಧಿಕಾರಿಗಳ ಅಧಿಕಾರ ಸ್ವೀಕಾರ ಸಮಾರಂಭಕ್ಕೆ ಜ್ಯೋತಿ ಬೆಳಗುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಕಳೆದ ಮೂರು ವರ್ಷಗಳಿಂದ ಜನರನ್ನು ಮಾರಕವಾಗಿ ಕಾಡಿದ್ದ ಕೊರೋನವನ್ನು ನಿಯಂತ್ರಿಸಲು ಸರ್ಕಾರದ ಜೊತೆಗೆ ಕೈಜೋಡಿಸಿದ್ದಲ್ಲದೆ,




ಗ್ರಾಮೀಣ ಭಾಗದ ಜನರನ್ನು ಜಾಗೃತಿಗೊಳಿಸುವ ಕಾರ್ಯವನ್ನು ಎರಡೂ ಸಂಸ್ಥೆಗಳು ಮಾಡಿದ್ದು, ಇವರ ಸಕಾಲಿನ ಕ್ರಮದಿಂದ ಹಲವಾರು ಜೀವಗಳ ರಕ್ಷಣೆಯಾಗಿದೆ ಎಂದರು.

ಅಧಿಕಾರ ಗೌಪ್ಯತೆಯನ್ನು ಬೋಧಿಸಿದ ನಿರ್ಗಮನ ಸಹಾಯಕ ಗೌರ್‍ನರ್ ಎನ್.ಎಸ್.ರಾಘವೇಂದ್ರ ಮಾತನಾಡಿ, ರೋಟರಿ ಕ್ಲಬ್ ಸಮಾಜ ಸೇವಾ ಚಟುವಟಿಕೆಗಳ ಮುಖ್ಯ ಕಾರ್ಯಕ್ಷೇತ್ರವಾಗಿದೆ. ಅಧಿಕಾರ ಸ್ವೀಕರಿಸಿದ ಅಧಿಕಾರಿಗಳು ಹಾಗೂ ಎಲ್ಲಾ ಪಾಧಿಕಾರಿಗಳು ಇನ್ನಷ್ಟು ಸೇವಾ ಕಾರ್ಯದ ಮೂಲಕ ಸಂಸ್ಥೆಗೆ ಹೆಸರು ತನ್ನಿ ಎಂದು ಶುಭಹಾರೈಸಿದರು.

ಇದೇ ಸಂದರ್ಭದಲ್ಲಿ 2023-24ನೇ ಸಾಲಿನ ರೋಟರಿ ಕ್ಲಬ್ ಅಧ್ಯಕ್ಷರಾಗಿ ಕೆ.ನಾಗೇಶ್, ಕಾರ್ಯದರ್ಶಿಯಾಗಿ ಆರ್.ತಿಪ್ಪೇಸ್ವಾಮಿ,ಇನ್ನರ್‌ವೀಲ್‌ಕ್ಲಬ್‌ಅಧ್ಯಕ್ಷರಾಗಿ ಮೀರಾರಮೇಶ್, ಕಾರ್ಯದರ್ಶಿಯಾಗಿ ಸುನಿತಾಬಸವರಾಜಗೌಡ ಅಧಿಕಾರ ಸ್ವೀಕರಿಸಿದರು.

ಸಹಾಯಕ ಗೌರ್‍ನರ್ ಉಮೇಶ್ ವಿ.ತುಪ್ಪದ,ಮಾಜಿಛೇರ್ಮನ್‌ಜ್ಯೋತಿಲಕ್ಷ್ಮಣ್, ಮಾಜಿ ಅಧ್ಯಕ್ಷ ಸಂತೋಷ್‌ಕುಮಾರ್, ಕೆ.ಎಂ.ಪ್ರಕಾಶ್, ಡಾ.ಎನ್.ಪಿ.ನಾಗರಾಜು, ಆರ್.ತಿಪ್ಪೇಸ್ವಾಮಿ, ಜಿ.ಕೆ.ಟಿ.ಮೂರ್ತಿ, ಡಾ.ಲೋಕೇಶ್, ಸಿ.ಸಿದ್ಧಾರ್ಥ, ಸಂತೋಷಕುಮಾರ್‌ರೆಡ್ಡಿ, ಶಿವಕೀರ್ತಿ, ಕೆ.ಎ.ಮೂರ್ತಪ್ಪ, ಎಸ್.ವಿ. ಮುರುಗೇಶ್, ಶೋಭಾಯತೀಶ್, ಸಹನ, ಬಿ.ವಿ.ಕಿರಣ್, ಡಾ.ಕೆ. ಎಂ.ಜಯಕುಮಾರ್, ಕೆ.ಜಿ.ಮಂಜುನಾಥ, ಸಂಜಯ್‌ಬಾಲಾಜಿ, ಕಾಂಗ್ರೆಸ್ ಮುಖಂಡ ನೇರಲಗುಂಟೆರಾಮಪ್ಪ, ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಶಾಸಕರಿಂದ ವಿಶ್ರಾಂತಿ ಗೃಹಕ್ಕೆ ಭೂಮಿ ಪೂಜೆ

## ಕಾರ್ಮಿಕರು ಸರಿಯಾಗಿ ಕೆಲಸ ಮಾಡಿದರೆ ದಾವಣಗೆರೆ ಸುಂದರವಾಗಿರುತ್ತದೆ

» **ದಾವಣಗೆರೆ**

ಪೌರಕಾರ್ಮಿಕರು ಸರಿಯಾಗಿತಮ್ಮತಮ್ಮ ಕೆಲಸ ಮಾಡಿದರೆದಾವಣಗೆರೆ ನಗರ ಸುಂದರವಾಗಿರುತ್ತದೆಎಂದುದಾವಣಗೆರೆದಕ್ಷಿಣ ವಿಧಾನಸಭಾಕ್ಷೇತ್ರ ಶಾಸಕರು ಹಾಗೂಮಾಜಿ ಸಚಿವರಾದ ಸನ್ಮಾನ್ಯಡಾ. ಶಾಮನೂರು ಶಿವಶಂಕರಪ್ಪ ರವರು ತಿಳಿಸಿದರು.

ಭಾನುವಾರದಾವಣಗೆರೆ ಮಹಾನಗರ ಪಾಲಿಕೆಯ ವ್ಯಾಪ್ತಿಯ ವಾರ್ಡ್ ನಂಬರ್ 17ರ ಸೂಪರ್ ಮಾರ್ಕೆಟ್ ಬಳಿ 'ಪೌರಕಾರ್ಮಿಕರುಗಳಿಗೆ ಅತ್ಯಾಧುನಿಕ ವಿಶ್ರಾಂತಿ ಗೃಹ' ನಿರ್ಮಿಸುವಕಾಮಗಾರಿಯ ಭೂಮಿ ಪೂಜೆ ನೆರವೇರಿಸಿ ಅವರು ಮಾತಾಡಿದರು.

ಮಹಾನಗರ ಪಾಲಿಕೆಯು ಪೌರಕಾರ್ಮಿಕರ ಹಿತದೃಷ್ಟಿಯಿಂದ ಅವರಿಗೆ ಅತ್ಯಾಧುನಿಕ ವಿಶ್ರಾಂತಿಗೃಹವನ್ನು ನಿರ್ಮಿಸುತ್ತಿದ್ದಾರೆ. ಇದರಿಂದಾಗಿ ಪ್ರತಿ ನಿತ್ಯಗಂಟೆಗಟ್ಟಲೇ ಕೆಲಸಮಾಡಿ ಸುಸ್ತಾಗಿ ಬರುವಕಾರ್ಮಿಕರಿಗೆ ವಿಶ್ರಾಂತಿಸಲು ಅನುಕೂಲವಾಗುತ್ತದೆಎಂದರು.2021-22ನೇ ಸಾಲಿನ 15ನೇ ಹಣಕಾಸು ಆಯೋಗದಅನುದಾನದಲ್ಲಿ ಪೌರ



ಕಾರ್ಮಿಕರುಗಳಿಗೆ ಅತ್ಯಾಧುನಿಕ ವಿಶ್ರಾಂತಿಗೃಹವನ್ನುನಿರ್ಮಾಣಮಾಡಲಾಗುತ್ತಿದೆ. ದಾವಣಗೆರೆಯರತ್ನುಕ□□ಸ್ಟ್ರಕ್ಷನ್‌ಗುತ್ತಿಗೆದಾರರಿಗೆ ನಿರ್ಮಾಣ ಹೊಣೆ ವಹಿಸಲಾಗಿದೆಎಂದು ಮಹಾನಗರ ಪಾಲಿಕೆಯಆಯುಕ್ತರೇಣುಕಾ ತಿಳಿಸಿದರು.ಈ ವೇಳೆ ಮಹಾನಗರ ಪಾಲಿಕೆಯ ಮೇಯರ್ ವಿನಾಯಕ್ ಪೈಲ್ವಾನ್, ಕಾರ್ಯಪಾಲ ಅಭಿಯಂತರರಾದ ಹರ್ಷಿತಾಎಂ.ಎನ್, ಸಹಾಯಕಕಾರ್ಯಪಾಲ ಅಭಿಯಂತರರಾದ ವಿನಾಯಕ್ ಎಂ ನಾಯಕ್, ಕಿರಿಯಅಭಿಯಂತರರಾದ ಮಾರುತಿ, ರತ್ನುಕ□□ಸ್ಟ್ರಕ್ಷನ್‌ಗುತ್ತಿಗೆದಾರರಾದತಿಲಕ್‌ರತ್ನು, ಉಮೇಶ್, ಶೀತಲ್ ನಾಯ್ಕ್, ಕಾರ್ತಿಕ್‌ಆಲೂರು, ಸ್ವರೂಪ್ ಮತ್ತಿ, ಅಭಿಲಾಷ್ ಹಾಗೂ ಪಾಲಿಕೆಯ ಪೌರಕಾರ್ಮಿಕರು ಸೇರಿದಂತೆಇತರರು ಹಾಜರಿದ್ದರು.

# ಹಸಿರು ಸೇನೆಯ ಸಂಸ್ಥಾಪಕ ಅಧ್ಯಕ್ಷ ಎಚ್.ಎಸ್.ರುದ್ರಪ್ಪನವರ ನುಡಿನಮನ



» **ಚಳ್ಳಕೆರೆ**

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಸ್ಥಾಪಿಸಿ ಸಾವಿರಾರು ರೈತರನ್ನು ಸಂಘಟಿಸಿ ರೈತ ಸಮಸ್ಯೆಗಳ ಬಗ್ಗೆ ಹೋರಾಟ ನಡೆಸಿದ ರೈತ ಸಂಘದ ಮಹಾನ್ ಪಿತಾಮಹ ಎಚ್.ಎಸ್. ರುದ್ರಪ್ಪನವರ ನುಡಿನಮನ ಕಾರ್ಯಕ್ರಮ ಜುಲೈ 19ರ ಬುಧವಾರ ಶಿವಮೊಗ್ಗದಲ್ಲಿ ನಡೆಯಲಿದೆ ಎಂದು ರೈತ ಸಂಘ ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ತಿಳಿಸಿದರು. ಅವರು, ನಗರದ ಪ್ರವಾಸಿಮಂದಿರದಲ್ಲಿ ಎಚ್.ಎಸ್.ರುದ್ರಪ್ಪನವರ ನುಡಿನಮನ ಕಾರ್ಯಕ್ರಮದ ಬಗ್ಗೆ ರೈತ ಪದಾಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಸಂಘಟನೆಯ ಎಲ್ಲಾ ಪ್ರಮುಖರು ನುಡಿನಮನ ಕಾರ್ಯಕ್ರಮದಲ್ಲಿ ತಪ್ಪದೆ ಪಾಲ್ಗೊಳ್ಳಬೇಕು, ಜುಲೈ 19ರ ಬುಧವಾರ ಬೆಳಗ್ಗೆ 10ಕ್ಕೆ ಶಿವಮೊಗ್ಗದ ಪ್ರವಾಸಿಮಂದಿರದಿಂದ ರೈತ ಪ್ರಮುಖರ ಕಾರ್ಯಕರ್ತರ ಮೆರವಣಿಗೆ ಆರಂಭವಾಗಲಿದ್ದು, ವೇದಿಕೆ ಕಾರ್ಯಕ್ರಮ ಶಿವಮೊಗ್ಗದ ಮತ್ತೂರು ರಸ್ತೆಯ ಎಚ್‌ಎಸ್‌ಆರ್ ಸಮಾಧಿ ಬಳಿ 12ಕ್ಕೆ ನಡೆಯಲಿದೆ ಎಂದರು. ಅಧ್ಯಕ್ಷ ಶ್ರೀಕಂಠಪ್ಪ, ರೈತ ಮುಖಂಡ ತಿಪ್ಪೇಸ್ವಾಮಿ, ಎಂ.ಎನ್. ಚನ್ನಕೇಶವಮೂರ್ತಿ ಮಂತಾದವರು ಉಪಸ್ಥಿತರಿದ್ದರು.

# ಮಾಜಿ ಶಾಸಕ ಹುಟ್ಟು ಹಬ್ಬಕ್ಕೆ 281 ಜನರಿಗೆ ಕಣ್ಣಿನ ಶಸ್ತ್ರ ಚಿಕಿತ್ಸೆ

» ಮಾನ್ವಿ

ದೇವದುರ್ಗದ ಮಾಜಿ ಶಾಸಕ ಕೆ.ಶಿವನಗೌಡ ನಾಯಕ ಇವರ ಕಳೆದ ಹುಟ್ಟುಹಬ್ಬದ ಅಂಗವಾಗಿ 400ಕ್ಕೂ ಹೆಚ್ಚು ಕಣ್ಣಿನ ಶಸ್ತ್ರ ಮಾಡಲಾಗಿತ್ತು. ಈ ವರ್ಷ 46ನೇ ಹುಟ್ಟುಹಬ್ಬದ ಅಂಗವಾಗಿ ಮೊದಲು ಸಿರಿವಾರ, ಪೋತ್ನಾಳ್, ಕವಿತಾಳ, ಹಿರೆಕೊಟ್ನೇಕಲ್, ಕಲ್ಲೂರು, ಬಲ್ಲಟಗಿ, ಬ್ಯಾಗವಾಟ್, ಕುರ್ಡಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಒಟ್ಟು ಸಾವಿರಕ್ಕೂ ಹೆಚ್ಚು ಜನರಿಗೆ ತಪಾಸಣೆ ಹಾಗೂ 281 ಜನರಿಗೆ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ಮಾನ್ವಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಾಡಲಾಗಿದೆ ಎಂದು ಅಭಿಮಾನಿಗಳ ಬಳಗದ ಮುಖಂಡ ಕೆ ನಾಗಲಿಂಗ ಸ್ವಾಮಿ ಹೇಳಿದರು.

ಇದು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಯಾದರೂ ಕೂಡ ಖಾಸಗಿ ವೈದ್ಯರನ್ನು ಸಂಪರ್ಕ ಮಾಡಿ ಒಬ್ಬರಿಗೆ 1500/- ಗಳಂತೆ ಹಾಗೂ ವಿಶೇಷವಾಗಿ ಡಾಕ್ಟರ್ ಇವರಿಗೆ ಒಂದು ಲಕ್ಷದವರೆಗೆ ಹಣವನ್ನು



ನೀಡಿ ಈ ಚಿಕಿತ್ಸೆಯನ್ನು ಮಾಡಲಾಗಿದ್ದು, ಈ ಕಣ್ಣಿನ ಉಚಿತ ತಪಾಸಣೆ ಹಾಗೂ ನೇತ್ರ ಶಸ್ತ್ರ ಚಿಕಿತ್ಸೆಯು ಜನತಾ ಐ ಕೇರ್ ಸೆಂಟರ್ ಬೆಂಗಳೂರು ಡಾಕ್ಟರ್ ಕೃಷ್ಣ ಮೋಹನ್ ಜಿಂಕೆ ಇವರ ಮತ್ತು. ಕೆಎಸ್‌ಎನ್ ಅಭಿಮಾನಿ ಬಳಗ ಮಾನವಿ ಮತ್ತು ಸಿರಿವಾರ ಹಾಗೂ ತಾಲೂಕ ಸಾರ್ವಜನಿಕ ಆಸ್ಪತ್ರೆ ಮಾನ್ವಿ ಸಹಯೋಗದಲ್ಲಿ ಅತ್ಯಂತ ಯಶಸ್ವಿಯಾಗಿ ನಡೆಯಿತು.

# ಪ್ರಶಸ್ತಿಗೆ ಆಹ್ವಾನ

» **ದಾವಣಗೆರೆ**

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 1 ಸಂಸ್ಥೆಗೆ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.ವಿವಿಧ ಕ್ಷೇತ್ರಗಳಲ್ಲಿ (ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ/ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ) ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 1 ಸಂಸ್ಥೆಗೆ ಪ್ರಶಸ್ತಿ ಸೇರಿ ಒಟ್ಟು 7 ಪ್ರಶಸ್ತಿಗಳನ್ನು ನೀಡಲಾಗುವುದು. ಅರ್ಹ ಹಿರಿಯ ನಾಗರಿಕರು ಹಾಗೂ ಸಂಸ್ಥೆಗಳು ವೆಬ್‌ಸೈಟ್ www.dwdsc.karnataka.gov.in ಮೂಲಕ ಅಥವಾ ನಗರದ ಎಂ.ಸಿ.ಸಿ. 'ಬಿ' ಬ್ಲಾಕ್ ನಲ್ಲಿರುವ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ಪಡೆದು ಆಗಸ್ಟ್ 14 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 08192-263939 ಹಾಗೂ ಹಿರಿಯ ನಾಗರಿಕರ ಸ. ಕೇಂದ್ರದ ದೂ. ಸಂ: 08192236784 ಸಂಪರ್ಕಿಸಿ.

**ಪ್ರಮುಖ ಸುದ್ದಿ**

# ಕಾತ್ರಾಳು ಕೆರೆಗೆ ಹರಿದ ತುಂಗೆ ಸಿಹಿ ಹಂಚಿ ಸಂಭ್ರಮ

» **ಚಿತ್ರದುರ್ಗ**

ತುಂಗಾ ಜಲಾಶಯ ಭರ್ತಿಯಾಗಿ ನೀರು ನದಿಗೆ ಹೋಗುತ್ತಿರುವ ಹಿನ್ನಲೆ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ವತಿಯಂದ ಜುಲೈ ಅಂತ್ಯಕ್ಕೆ ಬಯಲು ಸೀಮೆ ಬಾಗಿನ ಸಮರ್ಪರಣೆ ಮಾಡಲು ನಿರ್ಧರಿಸಲಾಗಿದೆ.

ಕಾತ್ರಾಳು ಕೆರೆಗೆ ತುಂಗಾ ನದಿ ನೀರು ಪೂರೈಕೆಯಾದ ಹಿನ್ನಲೆ ಹೋರಾಟ ಸಮಿತಿ ವತಿಯಿಂದ ಶನಿವಾರ ಕೆರೆಯಂಗಳದಲ್ಲಿ ಹಮ್ಮಿಕೊಳ್ಳಲಾದ ತರಳಬಾಳು ಶ್ರೀಗಳಿಗೆ ಧನ್ಯತೆ ಅರ್ಪಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ಬಸ್ತಿಹಳ್ಳಿ ಸುರೇಶ್‌ಬಾಬು ಭದ್ರಾ ಮೇಲ್ದಂಡೆ ಯೋಜನೆಯಲ್ಲಿ ತುಂಗಾ ನದಿಯಿಂದಲೇ ಹೆಚ್ಚು ನೀರಿನ ಪಾಲು ಇದೆ. ಹಾಗಾಗಿ ಜಲಾಶಯ ಭರ್ತಿಯಾಗಿರುವುದರಿಂದ ಈ ಬಾರಿ ಗಾಜನೂರು ಜಲಾಶಯಕ್ಕೆ ತೆರಳಿ ಬಾಗಿನ ಸಮರ್ಪಣೆ ಮಾಡಲಾಗುವುದು. ಕನಿಷ್ಟ ಒಂದು ಸಾವಿರ ಜನರು ತೆರಳುವ ನಿರೀಕ್ಷೆಯಿದೆ ಎಂದರು.

ತರಳಬಾಳು ಶ್ರೀಗಳ ದೂರದೃಷ್ಠಿಯಿಂದಾಗಿ ಜಿಲ್ಲೆಯ 42



ಕೆರೆಗಳಿಗೆ ತುಂಗ ಭದ್ರೆ ನದಿಯಿಂದ ಏತ ನೀರಾವರಿ ಮೂಲಕ ನೀರು ಹರಿಸಲಾಗುತ್ತಿದೆ.

ಹೋರಾಟ ಸಮಿತಿ ಶ್ರೀಗಳಿಗೆ ಧನ್ಯತೆ ವ್ಯಕ್ತಪಡಿಸುತ್ತಿದೆ. ಎಲ್ಲ ಕೆರೆಗಳ ಅಚ್ಚುಕಟ್ಟುದಾರರ ಸಭೆ ನಡೆಸಿ ತರಳಬಾಳು ಶ್ರೀಗಳಿಗೆ ಗೌರವ ಸಮರ್ಪಣೆ ಕಾರ್ಯಕ್ರಮ ಆಯೋಜಿಸಲು ತೀರ್ಮಾನಿಸಲಾಗಿದೆ. ಈ ಸಂಬಂಧ ಶೀಘ್ರ ಶ್ರೀಗಳ ಸಂಪರ್ಕಿಸಿ ಅಪ್ಪಣೆ ಪಡೆಯಲಾಗುವುದೆಂದರು.

ಸಮಿತಿಯ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ್ ಮಾತನಾಡಿ ಜಿಲ್ಲೆಯ ಕೆರೆಗಳಿಗೆ ತುಂಗ ಭದ್ರೆಯಿಂದ ನೀರು ಹರಿದು ಬರಲು ಶುರುವಾಗಿದೆ. ಕಳೆದ ಐದು ವರ್ಷಗಳಿಂದ ಕೆರೆಗಳಲ್ಲಿ ಗಿಡ ಮರಗಳ ತೆಗೆಸಿ ಏರಿ ಭದ್ರ ಮಾಡುವಂತೆ ಹಲವಾರು ಬಾರಿ ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳ ಗಮಕ್ಕೆ ತರಲಾಗಿದ್ದರೂ ಉದಾಸೀನ ತೋರಲಾಗಿದೆ. ಇನ್ನು ಮೇಲಾದರೂ ಕೆರೆಗಳ ಏರಿ ಭದ್ರ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಗಮನ ಹರಿಸಲಿ ಎಂದರು.

ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ ಮಾತನಾಡಿ ಈ ಮೊದಲು 'ಭದ್ರಾ ಮೇಲ್ದಂಡೆ ಯೋಜನೆಯಡಿ ಕಾತ್ರಾಳು, ಮುದ್ದಾಪುರ, ಸುಲ್ತಾನಿಪುರ ಕೆರೆಗಳಿಗೆ ನೀರು ತುಂಬಿಸುವ ಅವಕಾಶ ಕಲ್ಪಿಸಲಾಗಿತ್ತು. ಇದಕ್ಕೂ ಮೊದಲು ತರಳಬಾಳು ಜಗದ್ಗುರು ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಗಳ ಇಚ್ಚಾಶಕ್ತಿ ಬಲವಾಗಿ ಕಾತ್ರಾಳು ಕೆರೆಗೆ ನೀರು ಹರಿದಿದೆ. ಇದಕ್ಕಾಗಿ ಸಮಿತಿಯು ಅವರಿಗೆ ಧನ್ಯತೆ ಅರ್ಪಿಸುತ್ತಿದೆ ಎಂದರು.

ಹರಿಹರದ ರಾಜನಹಳ್ಳಿ ಸಮೀಪದ ತುಂಗಾ ಭದ್ರಾ ನದಿಯಿಂದ 565 ಕೋಟಿ ರುಪಾಯಿ ವೆಚ್ಚದಲ್ಲಿ 42 ಕೆರೆಗಳಿಗೆ ತೀರು ತುಂಬಿಸಲಾಗುತ್ತಿದೆ.

ಕಾತ್ರಾಳು ಕೆರೆಗೆ ನೀರು ಬಂದಿದ್ದು ಮುದ್ದಾಪುರ ಹಾಗೂ ಸುಲ್ತಾನಿಪುರ ಕೆರೆಗಳಿಗೆ ನೀರು ಪೂರೈಕೆ ಕಾಮಗಾರಿ ನಡೆಯುತ್ತಿದೆ. ಅದು ಶೀಘ್ರ ಪೂರ್ಣಗೊಂಡಲ್ಲಿ ಮುಂದಿನ ವರ್ಷ ಈ ಕೆರೆಗಳಿಗೂ ತುಂಗಭದ್ರಾ ನೀರು ಪೂರೈಕೆಯಾಗಲಿದೆ. ರೈತರು ತಮ್ಮ ವ್ಯಾಪ್ತಿಯ ಕೆರೆಗಳ ಏರಿ ಭದ್ರ ಮಾಡಿಸಿಕೊಳ್ಳುವ ನಿಟ್ಟಿನಲ್ಲಿ ಅಧಿಕಾರಿಗಳ ಮೇಲೆ ಒತ್ತಡ ಹಾಕಬೇಕೆಂದರು.

**ಫಾಸ್ಟ್ ನ್ಯೂಸ್**

## ಹೊಳಲ್ಕೆರೆ: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಹೊಳಲ್ಕೆರೆ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ 19 ರಿಂದ 35 ವರ್ಷ ವಯೋಮಿತಿಯೊಳಗಿನ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ. ಆಗಸ್ಟ್ 11 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಎನ್.ಹೆಚ್-13, ಹರಿಕೃಪ ಬಿಲ್ಡಿಂಗ್, ಶಿವಮೊಗ್ಗ ರಸ್ತೆ, ಹೊಳಲ್ಕೆರೆ-577526 ಇಲ್ಲಿ ಅರ್ಜಿ ಪಡೆದು, ಅರ್ಹ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಖಾಲಿ ಇರುವ 39 ಅಂಗನವಾಡಿ ಸಹಾಯಕಿಯರು ಹುದ್ದೆಗಳ ವಿವರ ಇಂತಿದೆ. ರಾಮಗಿರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಯಕನ ಕಟ್ಟೆ (ಪರಿಶಿಷ್ಟ ಜಾತಿ), ಗಂಗಸಮುದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಾಳಕಟ್ಟ ಉಪ್ಪಾರ ಹಟ್ಟಿ ( ಪರಿಶಿಷ್ಟ ಪಂಗಡ), ಗುಂಜಿಗನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಸ್.ಎಚ್. ಹಳ್ಳಿ ಗೊಲ್ಲರಹಟ್ಟಿ-ಬಿ(ಇತರೆ), ಆಡನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಸನಘಟ್ಟ (ಇತರೆ), ಅಂದನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ಯಾರೇಹಳ್ಳಿ (ಇತರೆ), ಅಂದನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ್ಲೇನಹಳ್ಳಿ (ಇತರೆ), ಅಂದನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂದನೂರು ಗೇಟ್ (ಇತರೆ), ಹೆಚ್.ಡಿ ಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೆಚ್.ಡಿ ಪುರ-ಡಿ (ಇತರೆ), ಉಪ್ಪರಿಗೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಉಪ್ಪರಿಗೇನಹಳ್ಳಿ-ಸಿ(ಇತರೆ), ಚಿತ್ರಹಳ್ಳಿ ಗ್ರಾಪಂ ವ್ಯಾಪ್ತಿಯ ಅಮೃತಾಪುರ-ಬಿ (ಇತರೆ), ಉಪ್ಪರಿಗೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೊಲ್ಲರಹಳ್ಳಿ(ಇತರೆ), ಚಿತ್ರಹಳ್ಳಿ ಗ್ರಾಪಂ ವ್ಯಾಪ್ತಿಯ ಅಮೃತಾಪುರ-ಎ (ಇತರೆ), ಚಿತ್ರಹಳ್ಳಿ ಗ್ರಾಪಂ ವ್ಯಾಪ್ತಿಯ ಚಿತ್ರಹಳ್ಳಿ ಗೊಲ್ಲರಹಟ್ಟಿ (ಇತರೆ), ಟಿ.ನುಲೆನೂರು ಗ್ರಾಪಂ ವ್ಯಾಪ್ತಿಯ ಟಿ. ನುಲೆನೂರು-ಎ(ಪರಿಶಿಷ್ಟ ಜಾತಿ), ಆಡನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಾಡಿಗಟ್ಟೆ-ಎ(ಇತರೆ), ಚಿಕ್ಕಎಮ್ಮಿಗನೂರು ಗ್ರಾಪಂ ವ್ಯಾಪ್ತಿಯ ಕಡೂರು-ಬಿ(ಇತರೆ), ಆಡನೂರು ಗ್ರಾಪಂ ವ್ಯಾಪ್ತಿಯ ಪಾಡಿಗಟ್ಟೆ-ಬಿ (ಇತರೆ), ಬಿ.ದುರ್ಗ ಗ್ರಾಪಂ ವ್ಯಾಪ್ತಿಯ ಕಲ್ಲವನಾಗತಿಹಳ್ಳಿ (ಇತರೆ), ಬಿ.ದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಲ್ಲವನಾಗತಿಹಳ್ಳಿ ಲಂಬಾಣಿಹಟ್ಟಿ(ಪರಿಶಿಷ್ಟ ಜಾತಿ), ದುಮ್ಮಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದುಮ್ಮಿ-ಎ (ಇತರೆ), ದುಮ್ಮಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದುಮ್ಮಿ ಗೊಲ್ಲರಹಟ್ಟಿ-ಬಿ(ಪರಿಶಿಷ್ಟ ಜಾತಿ), ಶಿವಗಂಗ ಗ್ರಾಪಂ ವ್ಯಾಪ್ತಿಯ ಕುಡಿನೀರಕಟ್ಟೆ (ಇತರೆ), ತಾಳ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೇರಲಕಟ್ಟೆ-ಬಿ (ಪರಿಶಿಷ್ಟ ಜಾತಿ), ತುಪ್ಪದಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಂಚಾಪುರ (ಪರಿಶಿಷ್ಟ ಜಾತಿ), ತಾಳಿಕಟ್ಟೆ ಗ್ರಾಪಂ ವ್ಯಾಪ್ತಿಯ ತಾಳಕಟ್ಟೆ-ಎಫ್(ಇತರೆ), ಹೊಳಲ್ಕರೆ ವಾರ್ಡ್-16 ಎ.ಕೆ ಕಾಲೋನಿ (ಪರಿಶಿಷ್ಟ ಜಾತಿ), ಗುಂಡೇರಿ ಗ್ರಾಪಂ ವ್ಯಾಪ್ತಿಯ ಗುಂಡೇರಿ-ಸಿ (ಇತರೆ), ಹೊಳಲ್ಕರೆ ವಾರ್ಡ್ 12-13 ಕೆಂಚವೀರಪ್ಪ ಬಡವಾಣೆ (ಇತರೆ), ಹೊಳಲ್ಕೆರೆ ವಾರ್ಡ್ 5-6 ಬಸವ ಲೇಔಟ್ (ಇತರೆ), ಹೊಳಲ್ಕೆರೆ ವಾರ್ಡ್ 4-5 ಸಿದ್ದಪ್ಪ ಲೇಔಟ್ (ಇತರೆ), ಗುಂಜಿಗನೂರು ಗ್ರಾಪಂ ವ್ಯಾಪ್ತಿಯ ಹೊನ್ನಕಾಲುವೆ(ಇತರೆ), ಹೊಳಲ್ಕರೆ ವಾರ್ಡ್ 3-8 ಹೊಳಲ್ಕೆರೆ-ಎ (ಇತರೆ), ಚಿತ್ರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿತ್ರಹಳ್ಳಿ ಗೇಟ್ (ಪರಿಶಿಷ್ಟ ಜಾತಿ), ಹೊಳಲ್ಕೆರೆ ವಾರ್ಡ್ 9-10 ಗೊಲ್ಲರಬೀದಿ(ಇತರೆ), ಆಡನೂರು ಗ್ರಾಪಂ ವ್ಯಾಪ್ತಿಯ ಆಡನೂರು-ಎ (ಇತರೆ), ತಾಳ್ಯ ಗ್ರಾಪಂ ವ್ಯಾಪ್ತಿಯ ತಾಳ್ಯ-ಸಿ (ಇತರೆ), ಗುಂಡೇರಿ ಗ್ರಾಪಂ ವ್ಯಾಪ್ತಿಯ ಹೊಳಲ್ಕೆರೆ ಲಂಬಾಣಿ ಹಟ್ಟಿ (ಪರಿಶಿಷ್ಟ ಜಾತಿ), ಆರ್. ನುಲೇನೂರು ಗ್ರಾಪಂ ವ್ಯಾಪ್ತಿಯ ಆರ್.ನುಲೇನೂರು-ಬಿ (ಇತರೆ), ಚಿಕ್ಕಜಾಜೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಜಾಜೂರು ಮಾರುತಿ ನಗರ (ಪರಿಶಿಷ್ಟ ಜಾತಿ) ಇಲ್ಲಿ ಖಾಲಿ ಇರುವ ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಎನ್.ಹೆಚ್.13 ಹರಿಕೃಪ ಬಿಲ್ಡಿಂಗ್, ಶಿವಮೊಗ್ಗ ರಸ್ತೆ, ಹೊಳಲ್ಕೆರೆ-577526, ದೂರವಾಣಿ ಸಂಖ್ಯೆ 08191-275250ಗೆ ಸಂಪರ್ಕಿಸಬಹುದು.

## ಹೊಸದುರ್ಗ ಟೌನ್ ಜಾಮಿಯಾ ಮಸ್ಜಿದ್ ಮಂಡಳಿ ಚುನಾವಣೆ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ನಗರದ ಜಾಮಿಯಾ ಮಸ್ಜಿದ್ ಇದರ 11 ಜನ ಸದಸ್ಯರ ಆಡಳಿತ ಮಂಡಳಿಯ ಚುನಾವಣೆಯನ್ನು ಅನುಮೋದಿತ ಬೈಲಾ ಪ್ರಕಾರ ಚುನಾಯಿಸಲು ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಆದೇಶದಂತೆ ದಾವಣಗೆರೆ ಜಿಲ್ಲಾ ವಕ್ಫ್ ಅಧಿಕಾರಿ ಅವರನ್ನು ಚುನಾವಣಾಧಿಕಾರಿಯನ್ನಾಗಿ ನೇಮಿಸಲಾಗಿದೆ. ಚುನಾವಣಾ ವೇಳಾಪಟ್ಟಿ ವಿವರ ಇಂತಿದೆ. 2023ರ ಜುಲೈ 17 ರಿಂದ 25 ರವರಗೆ ನಾಮಪತ್ರ ಸಲ್ಲಿಕೆ ನಡೆಯಲಿದೆ. ಜುಲೈ 26 ರಂದು ನಾಮಪತ್ರ ಪರಿಶೀಲನೆ, ಜುಲೈ 27 ರಂದು ನಾಮ ಪತ್ರಗಳ ಹಿಂಪಡೆಯುವಿಕೆ ನಂತರ ಚಿನ್ಹೆಗಳ ವಿತರಣೆ ಹಾಗೂ ಅಧಿಕೃತ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ ಮಾಡಲಾಗುವುದು. 2023ರ ಆಗಸ್ಟ್ 6ರಂದು ಬೆಳಿಗ್ಗೆ 8 ರಿಂದ ಮಧ್ಯಾಹ್ನ 3 ರವರೆಗೆ ಹೊಸದುರ್ಗದ ಟಿ.ಬಿ.ಸರ್ಕಲ್‌ನ ಗೌಸಿಯಾ ಶಾದಿ ಮಹಲ್‌ನಲ್ಲಿ ಮತದಾನ ನಡೆಯಲಿದೆ. ಅಂದು ಸಂಜೆ 4 ಗಂಟೆಯಿಂದ ಮತ ಎಣಿಕೆ ನಂತರ ಫಲಿತಾಂಶ ಪ್ರಕಟಿಸಲಾಗುವುದು.

# ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ತರುವ ವಿಚಾರದಲ್ಲಿ ರಾಜೀ ಇಲ್ಲ: ಸಿದ್ದರಾಮಯ್ಯ

» ಬೆಂಗಳೂರು

ದಲಿತರ ಜಮೀನು ಹಕ್ಕು ಕಾಪಾಡುವ ನಿಟ್ಟಿನಲ್ಲಿ ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ತರುವ ವಿಚಾರದಲ್ಲಿ ಯಾವುದೇ ರಾಜೀ ಇಲ್ಲ. ಕೊಟ್ಟ ಮಾತಿನಂತೆ ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಪಿಟಿಸಿಎಲ್ ಕಾಯ್ದೆ ತಿದ್ದುಪಡಿಗೆ ಸಂಬಂಧಿಸಿದಂತೆ ವಿವಿಧ ಸಂಘಟನೆಗಳ ಪ್ರತಿನಿಧಿಗಳು, ಸಚಿವರು, ಹಿರಿಯ ಅಧಿಕಾರಿಗಳು ಹಾಗೂ ಕಾನೂನು ತಜ್ಞರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ದಲಿತರ ಜಮೀನು ಹಕ್ಕು ಪರಭಾರೆ ನಿಷೇಧವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ವಿಚಾರದಲ್ಲಿ ಯಾವುದೇ ಬಹಿರಂಗ ಒತ್ತಡಕ್ಕೆ ಮಣಿಯುವುದಿಲ್ಲ. ಈ ವಿಚಾರದಲ್ಲಿ ರಾಜಿ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.



ದಲಿತರ ಜಮೀನು ಹಕ್ಕು ಕಾಪಾಡುವ ನಿಟ್ಟಿನಲ್ಲಿ ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ಮಾಡುವ ಕುರಿತ ಸರ್ಕಾರದ ನಿಲುವನ್ನು ಆಯವ್ಯಯದಲ್ಲಿಯೂ ಸ್ಪಷ್ಟಪಡಿಸಲಾಗಿದೆ. ಈ ಅಧಿವೇಶನದಲ್ಲೇ ಪಿಟಿಸಿಎಲ್ ತಿದ್ದುಪಡಿ ಕಾಯ್ದೆಯನ್ನು ಮಂಡಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು.

ಪ್ರಸ್ತುತ ನಡೆಯುತ್ತಿರುವ ವಿಧಾನಮಂಡಲದ ಅಧಿವೇಶನದಲ್ಲಿ ಪಿಟಿಸಿಎಲ್ ತಿದ್ದುಪಡಿ ಕಾಯ್ದೆಯನ್ನು ಮಂಡಿಸುವ ತೀರ್ಮಾನ ಮಾಡಿರುವ ನಿಟ್ಟಿನಲ್ಲಿ ಸಮುದಾಯದ ಮುಖಂಡರ ಅಭಿಪ್ರಾಯ ಪಡೆಯಲು ಸಭೆ ನಡೆಸಲಾಯಿತು. ಮತ್ತೆ ಮತ್ತೆ ಯಾವುದೇ ವಿವಾದ ಇರಬಾರದು. ಪಿಟಿಸಿಎಲ್ ಕಾಯ್ದೆಯ ಉದ್ದೇಶ ಪರಿಣಾಮಕಾರಿಯಾಗಿ ಈಡೇರಬೇಕು. ಭೂಮಿ ಕಳೆದುಕೊಂಡವರಿಗೆ ನ್ಯಾಯಾಲಯದಲ್ಲಿ ಹಿನ್ನಡೆಯಾಗಬಾರದು ಎನ್ನುವ ಉದ್ದೇಶದಿಂದ ಈ ಬಗ್ಗೆ ದಲಿತ ಮುಖಂಡರು, ಕಾನೂನು ತಜ್ಞರ ಅಭಿಪ್ರಾಯ ಪಡೆದುಕೊಳ್ಳಲಾಗಿದೆ ಎಂದು ಅವರು ಹೇಳಿದರು.

ನಾವು ಹಿಂದೆ ಮಾತು ಕೊಟ್ಟಂತೆ ಸರ್ಕಾರದ ಮೊದಲ ಅಧಿವೇಶನದಲ್ಲೇ ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ತರುತ್ತೇವೆ. ಅದರಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದರು.

ಈ ಸಭೆಯಲ್ಲಿ ಸಚಿವರುಗಳಾದ ಕೃಷ್ಣಭೈರೇಗೌಡ, ಡಾ. ಹೆಚ್.ಸಿ. ಮಹದೇವಪ್ಪ, ಹೆಚ್.ಕೆ. ಪಾಟೀಲ್, ಡಾ. ಜಿ. ಪರಮೇಶ್ವರ್, ಕೆ.ಹೆಚ್. ಮುನಿಯಪ್ಪ, ಸತೀಶ್ ಜಾರಕಿಹೊಳಿ, ಪ್ರಿಯಾಂಕ ಖರ್ಗೆ, ಶಿವರಾಜ ತಂಗಡಗಿ, ಬಿ. ನಾಗೇಂದ್ರ, ಕೆ.ಎನ್. ರಾಜಣ್ಣ, ಆರ್.ಬಿ. ತಿಮ್ಮಾಪುರ, ರಾಜ್ಯದ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಿ. ಮಣಿವಣ್ಣನ್, ಹುರಿಲಿಂಗ ಪೆದ್ದಿ ಮಠದ ಜ್ಞಾನಪ್ರಕಾಶ ಸ್ವಾಮೀಜಿ, ದಲಿತ ಮುಖಂಡರಾದ ಮಾವಳ್ಳಿ ಶಂಕರ್, ಶ್ರೀಧರ ಗಲಿವೀರ, ಇಂದೂದರ ಹೊನ್ನಾಪುರ, ಡಿ.ಕೆ. ಸಾಗರ್, ನಾಗರಾಜು, ಎಂ. ಮುನಿಸ್ವಾಮಿ, ಬಸವರಾಜ ಕೌತಾಳ್, ಎನ್. ವೆಂಕಟೇಶ್, ಎನ್. ಮುನಿಸ್ವಾಮಿ ಸೇರಿದಂತೆ 35ಕ್ಕೂ ಹೆಚ್ಚು ದಲಿತ ಮುಖಂಡರುಗಳು ಭಾಗಿಯಾಗಿದ್ದರು.

# ಕಾಂಗ್ರೆಸ್ ಸರ್ಕಾರ ಬಂದರೆ ನಾಡಿಗೆ ದರಿದ್ರ, ಬರ: ಮಾಜಿ ಸಿಎಂ ಎಚ್ಚರಿಕೆ

» ರಾಮನಗರ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದರೆ ನಾಡಿಗೆ 'ದರಿದ್ರ ಮತ್ತು ಬರ' ಬರುತ್ತದೆ ಎಂಬ ಪ್ರತೀತಿ ಇದೆ. ಯಾಕೊ ಈಗಲೂ ಅದೇ ವಾತಾವರಣವಿದೆ. ಸರಿಯಾಗಿ ಮಳೆಯೂ ಆಗುತ್ತಿಲ್ಲ' ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ವ್ಯಂಗ್ಯವಾಡಿದರು.

ಚನ್ನಪಟ್ಟಣ ತಾಲೂಕಿನ ಹಾರೋಕೊಪ್ಪ ಗ್ರಾಮದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಕಾವೇರಿ ನ್ಯಾಯಾಧೀಕರಣವು ನೀಡಿರುವ ನೀರು ಹಂಚಿಕೆ ತೀರ್ಪಿನ ಆಧಾರದ ಮೇಲೆ ತಮಿಳುನಾಡಿನವರು ನೀರು ಕೇಳುತ್ತಿದ್ದಾರೆ. ಅವರಿಗೆ ನೀರು ಕೊಡಬೇಕೊ ಬೇಡವೋ ಎಂಬುದನ್ನು ಸರ್ಕಾರ ತೀರ್ಮಾನ ಮಾಡಬೇಕು' ಎಂದರು.

'ಬಿಜೆಪಿ ಸೇರಿದಂತೆ ಯಾರ ಬಗ್ಗೆಯೂ ನನಗೆ ಮೃದು ಧೋರಣೆ ಇಲ್ಲ. ಬೇರೆ ಪಕ್ಷಗಳ ಕುರಿತು ಅಂತಹ ಧೋರಣೆ ಇಟ್ಟುಕೊಂಡು ಏನು ಮಾಡಲಿ? ನಾಡಿನ ಜನರ ಕಷ್ಟದ ಬಗ್ಗೆಯಷ್ಟೇ ನನ್ನದು ಮೃದು ಧೋರಣೆ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.



'ಜೆಡಿಎಸ್ ಅವಕಾಶವಾದಿ ರಾಜಕಾರಣ' ಎಂಬ ಸಚಿವ ದಿನೇಶ್ ಗುಂಡೂರಾವ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 'ಅವರೆಲ್ಲ ಯಾವ ರಾಜಕಾರಣ ಮಾಡುತ್ತಿದ್ದಾರೆ? ಡಿಎಂಕೆ ಜೊತೆ ಸೇರಿ ಹತ್ತು ವರ್ಷ ಸರ್ಕಾರ ಮಾಡಿದ್ದರಲ್ಲ, ಅದು ಯಾವ ರಾಜಕಾರಣ? ಯಾವ ತರ ರಾಜಕೀಯ ಮಾಡಬೇಕು ಅಂತ ದಿನೇಶ್ ಗುಂಡೂರಾವ್ ಅವರಿಂದ ಕಲಿಯಬೇಕಾ? ಅಂತಹ ದರ್ದು ನನಗೆ ಬಂದಿಲ್ಲ' ಎಂದು ತಿರುಗೇಟು ನೀಡಿದರು

## ಸುದೀಪ್ ಜೊತೆ ಸಂಧಾನಕ್ಕೆ ಸಿದ್ದ: ನಿರ್ಮಾಪಕ ಕುಮಾರ್

» ಬೆಂಗಳೂರು



ಕಿಚ್ಚ ಸುದೀಪ್ ಹಾಗೂ ನಿರ್ಮಾಪಕ ಎಂ.ಎನ್ ಕುಮಾರ್ ನಡುವಿನ ತಿಕ್ಕಾಟ ಮುಂದುವರಿದಿದೆ. ಸುದೀಪ್ ಅವರು ಹಣ ಪಡೆದು, ಕಾಲ್ ಶೀಟ್ ನಿಡಿಲ್ಲ ಎಂದು ಕುಮಾರ್ ಆರೋಪಿಸಿದ್ದರು. ಆದರೆ, ಸುದೀಪ್ ಅವರು ಇದನ್ನು ತಳ್ಳಿ ಹಾಕಿದ್ದರು. ಈಗ ಅವರು ಕುಮಾರ್ ವಿರುದ್ಧ ಕೋರ್ಟ್ ಮೆಟ್ಟಿಲೇರಿದ್ದಾರೆ. ಈ ಬೆನ್ನಲ್ಲೇ ಕುಮಾರ್ ಅವರು ಸುದೀಪ್ ವಿರುದ್ಧ ಫಿಲ್ಮ್ ಚೆಂಬರ್ ಮುಂದೆ ಪ್ರತಿಭಟನೆ ಆರಂಭಿಸಿದ್ದಾರೆ. ಅವರಿಗೆ ನಿರ್ಮಾಪಕರ ಸಂಘದ ಮಾಜಿ ಅಧ್ಯಕ್ಷ ಪ್ರವೀಣ್ ಕುಮಾರ್ ಮೊದಲಾದವರು ಸಾಥ್ ನೀಡಿದ್ದಾರೆ.

ನನಗೆ ಆಗಿರುವ ಸಮಸ್ಯೆ ಎಲ್ಲರಿಗೂ ಗೊತ್ತು. ಚಿತ್ರರಂಗಕ್ಕೆ ಫಿಲ್ಮ್ ಚೇಂಬರ್ ಒಂದುಮನೆ ಇದ್ದಹಾಗೆ. ಹೀಗಾಗಿ ನನ್ನ ಸಮಸ್ಯೆಯನ್ನು ಇಲ್ಲಿಯೇ ಬಗೆಹರಿಸಿಕೊಳ್ಳಲು ಬಂದಿದ್ದೇನೆ. ಸುದೀಪ್ ಅವರ ಬಗ್ಗೆ ನಾನು ಎಲ್ಲಿಯೂ ಕೆಟ್ಟದಾಗಿ ಮಾತನಾಡಿಲ್ಲ. ನಮಗೆ ಸರಿಯಾದ ಸ್ಪಂದನೆ ಸಿಗುತ್ತಿಲ್ಲ ಎಂದಷ್ಟೇ ಹೇಳಿದ್ದೇನೆ. ಸಮಸ್ಯೆ ಬಗೆಹರಿಸಿಕೊಳ್ಳುವ ತನಕ ಇಲ್ಲಿಯೇ ಧರಣಿ ಮಾಡುತ್ತೇನೆ' ಎಂದು ಕುಮಾರ್ ಹೇಳಿದ್ದಾರೆ.

'ನಾನು ಯಾರ ಸಹಾಯವನ್ನೂ ಕೇಳಿಲ್ಲ. ನನ್ನದು ಏನಿದೆ ಅದನ್ನು ಕ್ಲಿಯರ್ ಮಾಡಿದರೆ ಸಾಕು. ನಾವು ನಿರ್ಮಾಪಕರು, ಸಾಕಷ್ಟು ಜನರನ್ನು ಬೆಳೆಸಿದ್ದೀವಿ. ಎಲ್ಲರ ಗೌರವವೂ ಉಳಿಯಬೇಕು. ನನಗೆ ತೊಂದರೆಯಾದಾಗ ನಾನು ಯಾರ ಮುಖಾಂತರ ಕೇಳಬೇಕು? ಮಾಧ್ಯಮದವರ ಮುಂದೆಯೇ ಕೇಳಬೇಕು. ನಾನು ಹಾಗೆಯೇ ಮಾಡಿದ್ದೇನೆ. ಅವರು ಸಭೆಗೆ ಬರಲಿ. ಆಗ ಎಲ್ಲಾ ದಾಖಲೆಗಳನ್ನು ನೀಡುತ್ತೇನೆ ಎಂದಿದ್ದಾರೆ ಕುಮಾರ್.

ರಾಜಿ ಸಂಧಾನಕ್ಕೆ ನಾವು ರೆಡಿ. ಅವರು ಕರೆಯಬೇಕಿತ್ತು, ಆದರೆ ನಾವೇ ಕರೆಯುತ್ತಿದ್ದೇವೆ. ಪ್ರೀತಿಯಿಂದ ನಡೆದರೆ ಮಾತ್ರ ವ್ಯವಹಾರ. ಯಾರನ್ನು, ಯಾವುದಕ್ಕೂ ಬಲವಂತ ಮಾಡುವುದಕ್ಕೆ ಆಗುವುದಿಲ್ಲ. ನಮ್ಮಲ್ಲಿರುವ ಹಿರಿಯರು ಅವರಿಗೆ ಮಾರ್ಗದರ್ಶನ ನೀಡಬೇಕು. ನಮ್ಮ ಅಧ್ಯಕ್ಷರು ಬಂದ ಮೇಲೆ ಶಿವಣ್ಣ ಭೇಟಿಯ ಬಗ್ಗೆ ನಿರ್ಧಾರ ಮಾಡುತ್ತೇವೆ. ಸೂರಪ್ಪ ಬಾಬು ಹಿಂದೆ ನಿಂತು ಮಾಡಿಸುತ್ತಿರುವ ವಿಚಾರ ಸುಳ್ಳು ಎಂದು ಅವರು ಸ್ಪಷ್ಟನೆ ನೀಡಿದ್ದಾರೆ.

## 20 ವರ್ಷದ ಯುವಕ ಕ್ರಿಕೆಟ್ ಆಟವಾಡುವಾಗ ಸಾವು

» ರಾಷ್ಟ್ರೀಯ ಸುದ್ದಿ

ಇತ್ತೀಚಿನ ದಿನಗಳಲ್ಲಿ ವಯಸ್ಸಿನ ಅಂತರವಿಲ್ಲದೆ ಹಲವಅರು ರೀತಿಯ ರೋಗಕ್ಕೆ ತುತ್ತಾಗಿ ಹಿರಿಯರು ಕಿರಿಯರು ಸಾಯುತಿದ್ದಾರೆ. ಪ್ರತಿದಿನವು ಜಿಮ್ ವ್ಯಾಯಾಮ ರನ್ನಿಂಗ್ ಅಮತ ದೇಹವನ್ನು ಗಟ್ಟಿಮುಟ್ಟಾಗಿಡಲು ದೇಹವನನ್ನು ದಂಡಿಸುತ್ತಿರುತ್ತಾರೆ. ಇದರಿಂದ ಆರೋಗ್ಯ ಚೆನ್ನಾಗಿರುತ್ತೆ ಯಾವುದೆ ರೋಗ ನಮ್ಮತ್ತ ಸುಳಿಯಲ್ಲ ವೆಂದು ಆದರೆ ಈರೀತಿಯ ದೇಹ ದಂಡನೆಯಿಂದ ನೇ ಸಾಕಷ್ಟು ಯುವಕರು ತಮ್ಮ ಪ್ರಾಣವನ್ನು ಕಳೆದುಕೊಳ್ಳುತಿದ್ದಾರೆ ಇಂತಹುದೆ ಘಟನೆ ಕ್ರೀಡಾಪಟುವಿನ ಹೃದಯಾಘಾತವಾಗೆ ಸಾವನ್ನಪ್ಪಿದ್ದಾನೆ.



ಇದೀಗ ಗುಜರಾತ್‌ನಲ್ಲಿ 20 ವರ್ಷದ ಯುವಕನೊಬ್ಬ ಕ್ರಿಕೆಟ್ ಮೈದಾನದಲ್ಲಿ ಸಾವನ್ನಪ್ಪಿರುವ ಘಟನೆ ನಡೆದಿದೆ. ಗುಜರಾತಿನ ಅರಾವಳಿಯಲ್ಲಿ ಯುವಕ ಹೃದಯ ಸ್ತಂಭನದಿಂದ ಮೃತಪಟ್ಟಿದ್ದಾನೆ.

ಮಾಹಿತಿಯ ಪ್ರಕಾರ, ಪರ್ವ ಸೋನಿ ಅವರು ಅರವಳ್ಳಿಯ ಮೊಡಸದಲ್ಲಿರುವ ಗೋವರ್ಧನ್ ಸೊಸೈಟಿಯಲ್ಲಿರುವ ಶ್ರೈನ್ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುತ್ತಿದ್ದರು. ಕ್ರಿಕೆಟ್ ಮೈದಾನದಲ್ಲಿ ಆಡುತ್ತಿದ್ದಾಗ ಹೃದಯಾಘಾತದಿಂದ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ. ಸೋನಿ ಎಂಬ ಯುವಕ ಇಂಜಿನಿಯರಿಂಗ್ ಓದುತ್ತಿದ್ದರು. ಅವರ ಸಾವು ಕುಟುಂಬದವರಿಗೆ ದುಃಖ ಹೆಚ್ಚಿಸಿದೆ. ಯುವಕ ಇಂಜಿನಿಯರಿಂಗ್ ಜೊತೆ ದೇಶಿಯ ಕ್ರಿಕೆಟ್‌ನಲ್ಲಿ ಮಿಂಚುವ ಆಸೆಯನ್ನು ಹೊಂದಿದ್ದರಂತೆ. ಇದಕ್ಕೆ ತಕ್ಕ ಟ್ರೈನಿಂಗ್ ಸಹ ಪಡೆಯುತ್ತಿದ್ದರು ಎಂದು ತಿಳಿದುಬಂದಿದೆ.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ಹಾವೇರಿ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಖಾಲಿ ಇರುವ ಆರ್.ಬಿ.ಎಸ್.ಕೆ. ಆಯುಷ್ ವೈದ್ಯಾಧಿಕಾರಿಗಳು, ಡಯೆಟ್ ಕೌನ್ಸಿಲರ್, ಔಷಧಿ ವಿತರಕರು ಹಾಗೂ ಆರೋಗ್ಯ ನಿರೀಕ್ಷಕರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಜಾಲತಾಣ www.haveri.nic.inನಲ್ಲಿ ಪ್ರಕಟಿಸಲಾಗಿದೆ.

ಪ್ರಮುಖ ಸುದ್ದಿ

# ರಾಘವೇಂದ್ರ ಸಹಕಾರಿ ಬ್ಯಾಂಕ್ ಪ್ರಕರಣ ಸಿಬಿಐ ತನಿಖೆಗೆ

» ಬೆಂಗಳೂರು

ಗುರು ರಾಘವೇಂದ್ರ ಸಹಕಾರ ಬ್ಯಾಂಕ್‌ನ ಸಾವಿರಾರು ಕೋಟಿ ರೂ. ಅವ್ಯವಹಾರ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಗುವುದು ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ವಿಧಾನಪರಿಷತ್‌ನಲ್ಲಿಂದು ಪ್ರಕಟಿಸಿದ್ದಾರೆ.

ಬೆಂಗಳೂರಿನ ಬಸವನಗುಡಿಯಲ್ಲಿರುವ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ಠೇವಣಿದಾರರಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಿ ಅವರ ಹಿತಕಾಯಲು ಸಿಬಿಐಗೆ ಪ್ರಕರಣವನ್ನು ಒಪ್ಪಿಸಲಾಗುವುದು ಎಂದರು.ನಿಯಮ72ರಡಿ ಯು.ಬಿ. ವೆಂಕಟೇಶ್ ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿದ ಸಚಿವರು,ಗುರುರಾಘವೇಂದ್ರ ಸಹಕಾರ ಬ್ಯಾಂಕ್ ಅವ್ಯವಹಾರದ ಆಗರವಾಗಿದೆ.ಬ್ಯಾಂಕ್‌ನಪದಾಧಿಕಾರಿಗಳು, ಆಡಳಿತ ಮಂಡಳಿಯ ನಿರ್ದೇಶಕರು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು



ಸಾರ್ವಜನಿಕರಿಂದ ಅಪಾರ ಪ್ರಮಾಣದ ಹಣ ಠೇವಣಿ ರೂಪದಲ್ಲಿ ಸಂಗ್ರಹಿಸಿ ವಾಪಸ್ ನೀಡದೆ ವಂಚನೆ ಎಸಗಿರುವುದು ವಿವಿಧ ತನಿಖೆಗಳಲ್ಲಿ ಸ್ಪಷ್ಟವಾಗಿರುವ ಹಿನ್ನಲೆಯಲ್ಲಿ ಹೆಚ್ಚಿನ ತನಿಖೆಗೆ ಸಿಬಿಐಗೆ ವಹಿಸಲಾಗುವುದು ಎಂದರು.

ಬ್ಯಾಂಕ್‌ಗೆಸಂಬಂಧಿಸಿದದಾಖಲೆಗಳನ್ನು ಆಂಗ್ಲ ಭಾಷೆಗೆ ಅನುವಾದಿಸುವ ಕಾರ್ಯ ಪ್ರಗತಿಯಲ್ಲಿದೆ. ತಿಂಗಳೊಳಗೆ ಭಾಷಾಂತರ ಕಾರ್ಯ ಪೂರ್ಣಗೊಳ್ಳಲಿದೆ. ಸುಮಾರು 500 ಪುಟಗಳ ದಾಖಲೆಗಳು ಆಂಗ್ಲ ಭಾಷೆಗೆ ತರ್ಜಿಮೆಗೊಂಡ ನಂತರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.ಕಳೆದ ಹಲವಾರು ವರ್ಷಗಳಿಂದ ಗುರುರಾಘವೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ಠೇವಣಿದಾರರು ಬ್ಯಾಂಕ್‌ನ ಅವ್ಯವಹಾರದಿಂದ ಮತ್ತಷ್ಟು ಸಮಸ್ಯೆಗೆ ಸಿಲುಕಿದ್ದಾರೆ. ಅವರಿಗೆ ನ್ಯಾಯ ಒದಗಿಸಲು ಸಿಬಿಐ ತನಿಖೆಗೆ ಒಪ್ಪಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದರು.

ಈ ಸಂಬಂಧ ಈ ವರ್ಷದ ಜನವರಿ 17 ರಂದು ಸಹಕಾರ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸ ಭೆಯಲ್ಲಿ ನಿರ್ಣಯಿಸಲಾಯಿತು. ಮಾಹಿತಿಯನ್ನು ಆಂಗ್ಲಭಾಷೆಗೆ ತರ್ಜಿಮೆ ಮಾಡುವ ಹಿನ್ನೆಲೆಯಲ್ಲಿ ವಿಳಂಬವಾಗಿತ್ತು. ಹೀಗಾಗಿ ತರ್ಜಿಮೆ ಕಾರ್ಯವನ್ನು ತಿಂಗಳೊಳಗೆ ತಕ್ಷಣ ಪೂರೈಸಿ ಸಿಬಿಗೆ ವಹಿಸಲಾಗುವುದು ಎಂದು ಹೇಳಿದರು.

ಈ ಹಂತದಲ್ಲಿ ಮಧ್ಯ ಪ್ರವೇಶಿಸಿದ ಬಿಜೆಪಿಯ ವೈ.ಎ. ನಾರಾಯಣಸ್ವಾಮಿ, ಗುರುರಾಘವೇಂದ್ರ ಸಹಕಾರ ಬ್ಯಾಂಕ್‌ನ ಅವ್ಯವಹಾರವನ್ನು ಸಿಬಿಐ ತನಿಖೆಗೆ ಒಪ್ಪಿಸಲು ನಮ್ಮ ಸರ್ಕಾರ ನಿರ್ಧಾರ ಕೈಗೊಂಡಿತ್ತು ಎಂಬ ಹೇಳಿಕೆ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿಗೂ ಕಾರಣವಾಯಿತು.

ಈ ಹಂತದಲ್ಲಿ ಮಾತನಾಡಿದ ಹಲವು ಆಡಳಿತ ಪಕ್ಷದಸದಸ್ಯರು, ನಿಮ್ಮ ಸರ್ಕಾರದ ಅವಧಿಯಲ್ಲಿ ಕ್ರಮ ಕೈಗೊಂಡಿದ್ದರೆ ಗ್ರಾಹಕರಿಗೆ ಆದ ಅನ್ಯಾಯವನ್ನು ಏಕೆ ತಡೆಯಲಿಲ್ಲ. ಸಿಬಿಐಗೆ ವಹಿಸಲು ಮೀನಾಮೇಷ ವಹಿಸಿದ್ದು ಏಕೆ ಎಂದು ಸದಸ್ಯ ನಾರಾಯಣಸ್ವಾಮಿ ಅವರನ್ನು ತರಾಟೆಗೆ ತೆಗೆದುಕೊಂಡರು.

ಈ ಹಂತದಲ್ಲಿ ಸಚಿವ ರಾಜಣ್ಣ ಮಧ್ಯ ಪ್ರವೇಶಿಸಿ, ನೀವು ಅಧಿಕಾರದಲ್ಲಿದ್ದಾಗ ಸಿಬಿಐಗೆ ವಹಿಸುತ್ತೇವೆ ಎಂದು ಹೇಳಿದ್ದೀರೆ ಹೊರತು ಅದಕ್ಕೆ ಪೂರಕವಾದ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಕಳೆದ ತಿಂಗಳ 19 ರಿಂದ ಬ್ಯಾಂಕ್‌ಗೆ ಸಂಬಂಧಿಸಿದ ದಾಖಲಾತಿಗಳನ್ನು ಕನ್ನಡದಿಂದ ಇಂಗ್ಲೀಷ್‌ಗೆ ತರ್ಜಿಮೆ ಮಾಡುವ ಪ್ರಯತ್ನನಡೆಯುತ್ತಿದೆ. ಅದಾದ ತಕ್ಷಣ ಪ್ರಕರಣವನ್ನು ಸಿಬಿಐಗೆ ವಹಿಸಿ ಬ್ಯಾಂಕ್‌ನಲ್ಲಿ ಠೇವಣಿ ಇಟ್ಟಿದ್ದವರ ಹಿತ ಕಾಪಾಡಲಾಗುವುದು ಎಂದು ಹೇಳಿದರು.

**ಫಾಸ್ಟ್ ನ್ಯೂಸ್**

## ಕೃಷಿ ಪಂಡಿತ, ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ

» ಚಿತ್ರದುರ್ಗ

2023–24ನೇ ಸಾಲಿನ ಕೃಷಿ ಕ್ಷೇತ್ರದಲ್ಲಿ ಸಾಧನೆಗೈದ ಜಿಲ್ಲೆಯ ಆಸಕ್ತ ರೈತರಿಂದ ರಾಜ್ಯಮಟ್ಟದ ಕೃಷಿ ಪಂಡಿತ ಹಾಗೂ ತಾಲ್ಲೂಕು ಮತ್ತು ಜಿಲ್ಲಾಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 28 ಅರ್ಜಿ ಸಲ್ಲಿಸಲು ಕೊನೆಯ ದಿನ. ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ರೈತರು ಕೃಷಿಯಲ್ಲಿ ಸಮಗ್ರ ಕೃಷಿ ಪದ್ದತಿ, ಬೆಳೆ ಪದ್ದತಿ ಮತ್ತು ಬೆಳೆ ವೈವಿಧ್ಯೀಕರಣ, ಸಾವಯವ ಕೃಷಿ, ಕೃಷಿ ಯಂತ್ರೋಪಕರಣ ಅಭಿವೃದ್ಧಿ ನೀರಿನ ಸಮರ್ಪಕ ಬಳಕೆ ಇನ್ನಿತರೆ ಯಾವುದೇ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿರಬೇಕು. ರೈತ ಮಹಿಳೆಯರಿಂದ ಪ್ರತ್ಯೇಕವಾಗಿ ಹಾಗೂ ಆತ್ಮ ಯೋಜನೆಯಡಿ ಕೃಷಿಯಲ್ಲಿ ಸಮಗ್ರ ಬೆಳೆ ಪದ್ದತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ ವೈಜ್ಞಾನಿಕ ಯಂತ್ರೋಪಕರಣ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹೈಟೆಕ್ ಹಸಿರುಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು ಕುರಿ ಮೊಲ ಸಾಕಾಣಿಕೆ ಚುಟವಟಿಕೆಯಲ್ಲಿ ಸಾಧನೆ ಮಾಡಿದವರು ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. ನಿಗಧಿತ ನಮೂನೆ ಅರ್ಜಿಯನ್ನು ಇದೇ ಜುಲೈ 28ರ ಒಳಗಾಗಿ ಸಲ್ಲಿಸಲು ಕೋರಿದೆ. ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಭೇಟಿ ನೀಡಿ.

## ಮಾಜಿ ಸೈನಿಕರಿಂದ ಪೆಟ್ರೋಲಿಯಂ ರಿಟೇಲ್ ಮಳಿಗೆಗೆ ಅರ್ಜಿ

» ಚಿತ್ರದುರ್ಗ

ಕರ್ನಾಟಕ ರಾಜ್ಯದ ವಿವಿಧೆಡೆಗಳಲ್ಲಿ ಭಾರತ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ ಇವರ ಪೆಟ್ರೋಲಿಯಂ ರಿಟೇಲ್ ಮಳಿಗೆ ಮಾರಾಟಗಾರರಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ಮಾಜಿ ಸೈನಿಕರು "ಡಿಫೆನ್ಸ್" ವರ್ಗ (ಕ್ಯಾಟಗರಿ) ದಡಿಯಲ್ಲಿ "www.petrolpumpdealerchayan.in" ಎಂಬ ಜಾಲತಾಣದಲ್ಲಿ 2023ರ ಸೆಪ್ಟೆಂಬರ್ 27 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

## ಫೀಜಿಯೋಥೆರಪಿಸ್ಟ್ ನೇಮಕಾತಿಗೆ ಅರ್ಜಿ

» ಚಿತ್ರದುರ್ಗ

ಸಮನ್ವಯ ಶಿಕ್ಷಣ ಯೋಜನೆಯಡಿಯಲ್ಲಿ ಗೃಹಧಾರಿತ ಶಿಕ್ಷಣ ಮತ್ತು ಶಾಲಾಧಾರಿತ ಶಿಕ್ಷಣ ಪಡೆಯುತ್ತಿರುವ 85 ಮಕ್ಕಳಿಗೆ ಚಿತ್ರದುರ್ಗ ತಾಲ್ಲೂಕು ಕ್ಷೇತ್ರ ಸಂಪನ್ಮೂಲ ಕೇಂದ್ರದಲ್ಲಿ ಈ ಮಕ್ಕಳಿಗೆ ಫೀಜಿಯೋಥೆರಪಿ ಸೇವೆಯನ್ನು ಪೂರೈಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 24 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಡಿ.ಪಿ.ಟಿ. ಮತ್ತು ಬಿ.ಪಿ.ಟಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲಾಗುವುದು.ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ ಹಾಗೂ ಅರ್ಹತೆ ಹೊಂದಿರುವ ಬಗ್ಗೆ ಸಂಪೂರ್ಣವಾದ ಮಾಹಿತಿಯೊಂದಿಗೆ ಚಿತ್ರದುರ್ಗದ ಬಿ.ಡಿ.ರಸ್ತೆಯ ಹಳೇ ಮಾಧ್ಯಮಿಕ ಶಾಲಾ ಆವರಣದ ಬಿ.ಆರ್.ಸಿ. ಕಛೇರಿಗೆ ಅರ್ಜಿ ಸಲ್ಲಿಸಬೇಕು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

## ಹೃದಯ ತಪಾಸಣಾ ಶಿಬಿರ

» ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಮರಡಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಇಂಡಿಯಾನಾ ಎಸ್.ಜೆ.ಎಂ ಹಾರ್ಟ್ ಸೆಂಟರ್ ಇವರ ಸಂಯುಕ್ತಾಶ್ರಾಯದಲ್ಲಿ ಇದೇ ಜುಲೈ18ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ಚಿತ್ರದುರ್ಗ ತಾಲ್ಲೂಕಿನ ಮರಡಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಉಚಿತ ಹೃದಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.ಬಿ.ಪಿ, ಜಿ.ಆರ್.ಬಿ.ಎಸ್, ಇ.ಸಿ.ಜಿ, 2ಡಿ ಇಕ್ಕೋ ಮತ್ತು ಹೃದಯ ತಜ್ಞರೊಂದಿಗೆ ಸಮಾಲೋಚನೆ ಸೇರಿದಂತೆ ವಿವಿಧ ಸೌಲಭ್ಯಗಳು ಶಿಬಿರದಲ್ಲಿ ದೊರೆಯಲಿವೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9513766445 ಗೆ ಸಂಪರ್ಕಿಸಬಹುದು.

## ಪ್ರಧಾನಿ ಮೋದಿಯನ್ನು ಸೋಲಿಸಲು ವಿಪಕ್ಷಗಳ ಸಭೆ ಬಗ್ಗೆ ಸಿಎಂ ಟ್ವೀಟ್

» ಬೆಂಗಳೂರು

ಸರ್ವಾಧಿಕಾರಿ, ಕೋಮುವಾದಿ ಮತ್ತು ಭ್ರಷ್ಟ ಪ್ರಭುತ್ವದ ವಿರುದ್ದದ ಹೋರಾಟದಲ್ಲಿ ಒಂದಾಗಲು ಆಗಮಿಸುತ್ತಿರುವ ದೇಶದ ಪ್ರಮುಖ ವಿರೋಧಪಕ್ಷಗಳ ನಾಯಕರನ್ನು ಹಾರ್ದಿಕವಾಗಿ ಸ್ವಾಗತಿಸುತ್ತೇನೆ. ಜಾತ್ಯತೀತ, ಸಮಾಜವಾದಿ ಮತ್ತು ಪ್ರಜಾಪ್ರಭುತ್ವದ ಆಶಯಗಳ ಕೂಡು ಬದುಕಿನ ದೀರ್ಘ ಪರಂಪರೆ ಹೊಂದಿರುವ ಸರ್ವಜನಾಂಗದ ಶಾಂತಿಯ ತೋಟದಲ್ಲಿ ಬಿತ್ತಿದ ಬೀಜ, ಬೆಳೆದು ಫಲ ನೀಡಲಿ ಎನ್ನುವುದು ಕನ್ನಡಿಗರೆಲ್ಲರ ಒಕ್ಕೊರಲಿನ ಹಾರೈಕೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟ್ವೀಟ್ ಮಾಡಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T